ಸಂಪುಟ : 10 ಸಂಚಿಕೆ: 183 ಪುಟ : 4+2 ಬೆಲೆ: 3.00 ಬುಧವಾರ ಆಗಸ್ಟ್ 27 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 183 Pages : 4+2 Price : 3.00 Wednesday August 27 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗಣೇಶ ಚತುರ್ಥಿ ಶುಭಾಶಯಗಳು

ಶೂರ್ಪಕರ್ಣ ಶ್ರೀ ಗಣೇಶನು ನಿಮಗೆ ಒಳಿತನ್ನು ಮಾಡಲಿ. ಸದ್ಬುದ್ಧಿ ಸಂಪತ್ತನ್ನು ಕರುಣಿಸಿ ಬಾಳು ಬೆಳಗಲಿ



ಓದುಗರು, ಪತ್ರಿಕಾ ವಿತರಕರು, ಹಿತೈಷಿಗಳು, ಅಭಿಮಾನಿಗಳು ಹಾಗೂ ಜಾಹೀರಾತುದಾರರಿಗೆ ಶ್ರೀ ಗಣಪತಿ ಹಬ್ಬದ ಹಾರ್ದಿಕ ಶುಭಾಶಯಗಳು

**ಬಿಡುವು**

ಗಣೇಶ ಚತುರ್ಥಿ ಅಂಗವಾಗಿ ಇಂದು ಕಚೇರಿಗೆ ಬಿಡುವು ಇದ್ದು, ನಾಳಿನ ಸಂಚಿಕೆ ಪ್ರಕಟವಾಗುವುದಿಲ್ಲ.

–ಸಂಪಾದಕರು

### ಸಂಕಷ್ಟದ ನಡುವೆಯೂ ಪ್ರಥಮ ವಂದಿತ ಗಣೇಶನ ಹಬ್ಬಕ್ಕೆ ಸಿದ್ಧತೆ

# ಹಬ್ಬದ ಸಂಭ್ರಮಕ್ಕೆ ಕವಿದ ಕರಿನೆರಳು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಅತಿವೃಷ್ಟಿ, ರೋಗಬಾಧೆಯಿಂದ ಮುಂಗಾರಿನ ಬೆಳೆಗಳೆಲ್ಲ ಹಾಳಾಗಿ ಕೈಗೆ ಬಂದ ತುತ್ತು ಬಾಯಿಗೆ ಬರದಂತಾಗಿ ರೈತರು ಸೇರಿ ಜನಸಮುದಾಯ ಆರ್ಥಿಕ ಸಂಕಷ್ಟದಲ್ಲಿದ್ದಾರೆ. ರೈತರ ಮಟ್ಟಿಗೆ ಈ ವರ್ಷ ನಂಬಿದ ದೇವರೂ ಕೈಹಿಡಿಯಲು ಮನಸ್ಸು ಮಾಡಿದಂತಿಲ್ಲ. ಸಂಕಷ್ಟದ ನಡುವೆಯೂ ಸಂಕಷ್ಟ ನಿವಾರಕ, ವಿಘ್ನನಾಶಕ, ಪ್ರಥಮ ವಂದಿತ ಗಣೇಶನಿಗೆಂದೇ ಮೀಸಲಾದ ಗಣೇಶ ಚತುರ್ಥಿ ಹಬ್ಬವನ್ನು ಸಾಂಪ್ರದಾಯಿಕವಾಗಿ ಆಚರಿಸಲು ಜನತೆ ಸಜ್ಜಾಗಿದ್ದಾರೆ. ಹಬ್ಬದ ಮುನ್ನಾದಿನ ಮಂಗಳವಾರ ಪಟ್ಟಣದ ಮಾರ್ಕೆಟ್‌ನಲ್ಲಿ ಗಣೇಶ ಮೂರ್ತಿ, ಹೂವು, ಹಣ್ಣು, ತಳಿರು–ತೋರಣ, ದಿನಸಿ, ಪಟಾಕಿ, ಅಲಂಕಾರಿಕ ಮತ್ತು ಅಗತ್ಯ ವಸ್ತುಗಳ ಖರೀದಿಯಲ್ಲಿ



ತೊಡಗಿದ್ದು ಕಂಡುಬಂದಿತು.

'ಒಕ್ಕಲಿಗ ಒಕ್ಕದಿದ್ದರೆ ಬಿಕ್ಕುವುದು ಜಗವೆಲ್ಲ' ಎನ್ನುವಂತೆ ರೈತರಿಗೆ ಸಮೃದ್ಧಿಯಾದಾಗ ಮಾತ್ರ ಎಲ್ಲರೂ ಸಂಭ್ರಮದಲ್ಲಿರುತ್ತಾರೆ. ಆದರೆ ರೈತ ನಷ್ಟದಲ್ಲಿರುವುದು ಎಲ್ಲ ರೀತಿಯ ವ್ಯಾಪಾರ–ವಹಿವಾಟು, ಹಬ್ಬದ ಸಂಭ್ರಮಕ್ಕೆ ಕರಿನೆರಳು ಆವರಿಸಿದಂತಾಗಿದೆ.

ಪಟ್ಟಣಕ್ಕೆ ತಾಲೂಕಿನ ಜನರಷ್ಟೇ ಅಲ್ಲದೆ ನೆರೆಯ ಕುಂದಗೋಳ, ಶಿರಹಟ್ಟಿ, ಶಿಗ್ಗಾಂವ, ಸವಣೂರ ತಾಲೂಕಿನ ಜನರೂ ವ್ಯಾಪಾರಕ್ಕೆ ಬರುವುದರಿಂದ ಮುಖ್ಯ ಮಾರುಕಟ್ಟೆ ಪ್ರದೇಶ ಜನಸಂದಣಿಯಿಂದ ತುಂಬಿ ಟ್ರಾಫಿಕ್ ಕಿರಿಕಿರಿ ಉಂಟಾಯಿತು. ಟ್ರಾಫಿಕ್ ಸಮಸ್ಯೆ ನಿವಾರಣೆಗೆ ಪೊಲೀಸರು ಹರಸಾಹಸ ಪಟ್ಟರು. ಹಬ್ಬದ ದಿನ ಇನ್ನೂ ಹೆಚ್ಚಿನ ಟ್ರಾಫಿಕ್ ಉಂಟಾಗುವುರಿಂದ ಪುರಸಭೆ ಮತ್ತು ಪೊಲೀಸರು ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂಬ ಮಾತುಗಳು ಸಾರ್ವಜನಿಕರಿಂದ ಕೇಳಿಬಂದವು.

ಬಸ್ ನಿಲ್ದಾಣದಲ್ಲಿ ಹೆಚ್ಚಿನ ಜನಸಂದಣಿ, ಸಂಚಾರದಿಂದ ಕೂಡಿತ್ತು. ಬಸ್‌ಗಳಂತೂ ತುಂಬಿ ತುಳುಕುತ್ತಲೇ ಸಾಗಿದವು. ಪ್ರಥಮ ಪೂಜಿತ ವಿನಾಯಕನ ಸ್ವಾಗತಕ್ಕಾಗಿ ತಾಲೂಕಿನಾದ್ಯಂತ ಜನತೆ ಪೂರ್ವ ಸಿದ್ಧತೆ ಮಾಡಿಕೊಂಡಿದ್ದು, ತಮ್ಮ ಪೂಜೆಯನ್ನು ಸ್ವೀಕರಿಸಿಯಾದರೂ ಗಣಪ ಸಂತುಷ್ಟನಾಗಿ ಅನುಗ್ರಹಿಸಿದರೆ ಸಾಕು ಎಂಬ ಭಾವ ಎಲ್ಲರ ಮೊಗದಲ್ಲಿತ್ತು.

> ಡಜನ್ ಬಾಳೆ ಹಣ್ಣು ಸೇರಿ ಸೇಬು, ಕಿತ್ತಳೆ, ಚಿಕ್ಕೂ, ಮೋಸಂಬಿ ಒಳಗೊಂಡ ಒಟ್ಟು 5 ತರಹದ ಹಣ್ಣುಗಳ ಸೆಟ್‌ಗೆ 150–200 ರೂ.ವರೆಗೆ ದರವಿತ್ತು. ದಿನಸಿ, ಅಲಂಕಾರಿಕ ವಸ್ತುಗಳು, ಹೂವು, ಬಾಳೆ, ಕಬ್ಬು, ವಿಳ್ಯದೆಲೆ ಸೇರಿ ಹಬ್ಬದ ಸಾಮಗ್ರಿಗಳ ಬೆಲೆ ಕೊಂಚ ಹೆಚ್ಚಳವಾಗಿದ್ದರೂ ಜನರು ಹಬ್ಬದ ಆಚರಣೆಗೆ ಅತ್ಯಗತ್ಯವಾಗಿರುವ ವಸ್ತುಗಳ ಖರೀದಿ ನಡೆಸಿದರು.



### ಶಿಕ್ಷಕರ ದಿನಚಾರಣೆ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಶಾಸಕ ಜಿ.ಎಸ್. ಪಾಟೀಲ

# 70 ಲಕ್ಷ ರೂ ವೆಚ್ಚದಲ್ಲಿ ಗುರುಭವನದ ಮೇಲ್ಮಹಡಿ ನಿರ್ಮಾಣ



■ ವಿಜಯಸಾಕ್ಷಿ ಸುದ್ದಿ, ರೋಣ

ಶಿಕ್ಷಕರು ಅಕ್ಷರ ಜ್ಞಾನ ನೀಡಿದ ಪರಿಣಾಮ ನಾವೆಲ್ಲರೂ ಗೌರಯುತ ಸ್ಥಾನದಲ್ಲಿದ್ದೇವೆ. ಹೀಗಾಗಿ ಶಿಕ್ಷಕರ ದಿನಚಾರಣೆಯನ್ನು ಎಲ್ಲ ಇಲಾಖೆಯ ಅಧಿಕಾರಿಗಳು ಸೇರಿದಂತೆ ಜನಪ್ರತಿನಿಧಿಗಳು ಆಚರಿಸಬೇಕು ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಅವರು ಮಂಗಳವಾರ ಪಟ್ಟಣದ ಕನ್ನಡ ಸಾಹಿತ್ಯ ಭವನದಲ್ಲಿ ಜರುಗಿದ ಶಿಕ್ಷಕರ ದಿನಚಾರಣೆ ಕಾರ್ಯಕ್ರಮದ ಪೂರ್ವಭಾವಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು. ತಾಲೂಕಿನ ಶಿಕ್ಷಕರಿಗೆ ಮಾತು ಕೊಟ್ಟಂತೆ ನನ್ನ ಅವಧಿಯಲ್ಲಿ ದೊಡ್ಡ ಪ್ರಮಾಣದ ಗುರುಭವನವನ್ನು ನಿರ್ಮಿಸಿ ಕೊಟ್ಟಿದ್ದು, ಈಗ ಮತ್ತೆ ಗುರುಭವನದ ಮೇಲ್ಮಹಡಿ ಕಟ್ಟಡಕ್ಕೆ 70 ಲಕ್ಷ ರೂಗಳ ಅನುದಾನವನ್ನು ಒದಗಿಸಲಾಗಿದೆ. ಶಿಕ್ಷಕರ ಬೇಡಿಕೆಯಂತೆ ಅಗತ್ಯ ಬಿದ್ದಲ್ಲಿ ಇನ್ನೂ ಹೆಚ್ಚಿನ ಅನುದಾನವನ್ನು ಒದಗಿಸಲಾಗುವುದು ಎಂದರು. ಶಿಕ್ಷಕರ ಸಂಘದ ಅಧ್ಯಕ್ಷ ವಾಯ್.ಡಿ. ಗಾಣಿಗೇರ ಮಾತನಾಡಿ, ಸೆ 5ರಂದು ಈದ್ ಮಿಲಾದ್ ಹಬ್ಬ ಇರುವ ಕಾರಣ ದಿನಚಾರಣೆಯನ್ನು ಸೆ. 8ಕ್ಕೆ ನಿಗದಿ ಮಾಡಲಾಗಿದೆ. ಇದಕ್ಕೆ ಶಿಕ್ಷಣ ಇಲಾಖೆ, ವಿವಿಧ ಇಲಾಖೆಗಳ ಅಧಿಕಾರಿಗಳು, ಶಿಕ್ಷಕರು ಸಮ್ಮತಿ ವ್ಯಕ್ತಪಡಿಸಿದ್ದಾರೆ. ನಮ್ಮ ಈ ಕಾರ್ಯಕ್ಕೆ ಶಾಸಕರು ಸಹ ಮೆಚ್ಚುಗೆಯನ್ನು ವ್ಯಕ್ತಪಡಿಸಿರುವುದು ನಮಗೆ ಸಂತಸ ತಂದಿದೆ ಎಂದರು.

ತಹಸೀಲ್ದಾರ್ ನಾಗರಾಜ ಕೆ ಮಾತನಾಡಿ, ಸಮಾಜದಲ್ಲಿ ಶಿಕ್ಷಕ ಹುದ್ದೆಗೆ ತನ್ನದೇ ಆದ ಘನತೆಯಿದೆ. ಓರ್ವ ಶಿಕ್ಷಕ ತನ್ನ ಕೊಠಡಿಯ 40 ವಿದ್ಯಾರ್ಥಿಗಳನ್ನು ತಿದ್ದಿ ತೀಡುವ ಮೂಲಕ ಸಮಾಜಕ್ಕೆ ಉತ್ತಮ ಪ್ರಜೆಗಳನ್ನಾಗಿ ರೂಪಿಸಿಕೊಡುತ್ತಾನೆ. ಅಂತಹ ಮಹಾನ್ ಕಾರ್ಯದಲ್ಲಿ ತೊಡಗಿಕೊಂಡಿರುವ ಶಿಕ್ಷಕರ ದಿನಚಾರಣೆಯನ್ನು ಎಲ್ಲ ಇಲಾಖೆಗಳ ಅಧಿಕಾರಿಗಳು ಸೇರಿ ಆಚರಿಸುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದರು.

ಡಾ. ಕೆ.ಬಿ. ಧನ್ನೂರ, ಮುತ್ತಣ್ಣ ಸಂಗಳದ, ವಿ.ಬಿ. ಸೋಮನಕಟ್ಟಿಮಠ, ಗಜೇಂದ್ರಗಡ ತಹಸೀಲ್ದಾರ ಕಿರಣಕುಮಾರ, ತಾ.ಪಂ ಇಒ ಚಂದ್ರೇಶಖರ ಕಂದಕೂರ, ಸಿಪಿಐ ಎಸ್.ಎಸ್. ಬಿಳಗಿ, ಅಕ್ಷರ ದಾಸೋಹಾಧಿಕಾರಿ ಆರ್.ಎಲ್. ನಾಯ್ಕರ, ನರೇಗಲ್ಲ ಪಿಎಸ್‌ಐ ಐಶ್ವರ್ಯ ನಾಗರಾಳ, ಗಜೇಂದ್ರಗಡ ಪಿಎಸ್‌ಐ ಪ್ರಕಾಶ, ಬಿಇಒ ಎ.ಎನ್. ಕಂಬೋಗಿ, ಎಂ.ಎ. ಫಣಿಬಂದ್, ಎ.ಕೆ. ಒಂಟಿ, ಮಹೇಶ ಕುರಿ, ಸಿ.ಕೆ. ಕೇಸರಿ, ಶಿಕ್ಷಕಿ ಕ್ಯಾತನಗೌಡ್ರ ಸೇರಿದಂತೆ ತಾಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಶಿಕ್ಷಕರು ಉಪಸ್ಥಿತರಿದ್ದರು.

> ಆ.29ರಂದು ತಹಸೀಲ್ದಾರರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಿ ಶಿಕ್ಷಕರ ದಿನಚಾರಣೆ ಯಶಸ್ವಿಗೆ ವಿವಿಧ ಸಮಿತಿಗಳನ್ನು ರಚನೆ ಮಾಡಲಾಗಿದೆ. ದಿನಚಾರಣೆ ಕಾರ್ಯಕ್ರಮಕ್ಕೆ ಆಗಮಿಸುವ ಎಲ್ಲ ಶಿಕ್ಷಕರಿಗೂ ಅಕ್ಕಮಹಾದೇವಿ ಕಲ್ಯಾಣ ಮಂಟಪದಲ್ಲಿ ಊಟದ ವ್ಯವಸ್ಥೆಯನ್ನು ಸ್ವತಃ ನಾನೇ ಮಾಡುತ್ತೇನೆ. ಗುರುಭವನದ ಆವರಣದಲ್ಲಿ ಎಲ್‌ಇಡಿ ಪರದೆ ವ್ಯವಸ್ಥೆಯನ್ನು ಸಹ ಮಾಡಲಾಗುವುದು. ಒಟ್ಟಿನಲ್ಲಿ ಕಾರ್ಯಕ್ರಮ ಯಶಸ್ವಿಯಾಗಬೇಕು.
>
> – ಜಿ.ಎಸ್.ಪಾಟೀಲ. ಶಾಸಕರು, ರೋಣ.

### ಶ್ರೀಕ್ಷೇತ್ರ ಧರ್ಮಸ್ಥಳ ಹೆಸರಿಗೆ ಅಪಪ್ರಚಾರ ಖಂಡಿಸಿ ಬಿಜೆಪಿಯಿಂದ ಪ್ರತಿಭಟನೆ

# ಹಿಂದೂಗಳ ಧಾರ್ಮಿಕ ಭಾವನೆಗೆ ಅಪಮಾನ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶ್ರೀಕ್ಷೇತ್ರ ಧರ್ಮಸ್ಥಳದ ಕುರಿತಾಗಿ ಅಪಪ್ರಚಾರ ಮಾಡುತ್ತಿರುವುದನ್ನು ಖಂಡಿಸಿ ಮಂಗಳವಾರ ಶಿರಹಟ್ಟಿಯಲ್ಲಿ ಶಾಸಕ ಡಾ. ಚಂದ್ರು ಲಮಾಣಿ ನೇತೃತ್ವದಲ್ಲಿ ಪಟ್ಟಣದ ಶ್ರೀ ಜ.ಫಕೀರೇಶ್ವರ ಮಠದಿಂದ ಬೃಹತ್ ಮೆರವಣಿಗೆ ನಡೆಸಿ ಪ್ರಮುಖ ವೃತ್ತಗಳಲ್ಲಿ ಧರ್ಮದ ಉಳಿವಿಗಾಗಿ ಧರ್ಮಯುದ್ಧ ಎಂಬ ಘೋಷಣೆಗಳನ್ನು ಕೂಗುತ್ತಾ ನೆಹರು ವೃತ್ತದಲ್ಲಿ ತಹಸೀಲ್ದಾರ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ, ಶ್ರೀಕ್ಷೇತ್ರ ಧರ್ಮಸ್ಥಳವು ಕೇವಲ ಕರ್ನಾಟಕವಲ್ಲದೇ ದೇಶಾದ್ಯಂತ ಕೋಟ್ಯಾಂತರ ಭಕ್ತರನ್ನು ಹೊಂದಿದೆ. ಹಿಂದೂಗಳಿಗೆ ಇದು ಪ್ರಮುಖ ಧಾರ್ಮಿಕ ಶ್ರದ್ಧಾ ಕೇಂದ್ರವಾಗಿದೆ. ಹಿಂದೂಗಳ ಧಾರ್ಮಿಕ ಭಾವನೆಯನ್ನು ಅಪಮಾನಿಸುವ ದುರುದ್ದೇಶದಿಂದ ಕೆಲವು ಕಿಡಿಗೇಡಿಗಳು ಹಾಗೂ ಎಡಚರರು ಸುಳ್ಳು ಪ್ರಚಾರವನ್ನು ಮಾಡುತ್ತಿದ್ದಾರೆ. ಇಂತಹ ಕಿಡಿಗೇಡಿಗಳಿಗೆ ಕುಮ್ಮಕ್ಕು ನೀಡುವ ಷಡ್ಯಂತ್ರ್ಯ ನಡೆದಿದೆ. ಅನಾಮಿಕ ವ್ಯಕ್ತಿಯೊಬ್ಬ ಯಾವುದೇ ಆಧಾರಗಳಿಲ್ಲದೇ ಮಾಡಿದ ಆರೋಪಕ್ಕೆ ರಾಜ್ಯ ಸರಕಾರ ಲಕ್ಷಾಂತರ ರೂ.ಗಳನ್ನು ವ್ಯಯಿಸುತ್ತಿದೆ. ಈ ಅನಾಮಿಕನ ಹಿಂದಿರುವ ದುಷ್ಟ ವ್ಯಕ್ತಿಗಳು ಯಾರು ಮತ್ತು ಅವರು ಮಾಡುತ್ತಿರುವ ಸಂಚುಗಳೇನು ಎಂಬುದನ್ನು ಸರಕಾರ ತಿಳಿಸಿಲ್ಲ. ಧಾರ್ಮಿಕ ಶ್ರದ್ಧಾ ಕೇಂದ್ರಗಳನ್ನು ಅವಮಾನಿಸುತ್ತಿರುವ ಸಮಾಜ ವಿರೋಧಿ ವ್ಯಕ್ತಿಗಳನ್ನು ಪತ್ತೆ ಹಚ್ಚಿ ಅವರನ್ನು ಶಿಕ್ಷೆಗೆ ಒಳಪಡಿಸಬೇಕು.

▸▸ 3ನೇ ಪುಟಕ್ಕೆ

### ಶಿರಹಟ್ಟಿ ತಾ.ಪಂ ಸಾಮಾನ್ಯ ಸಭೆಯಲ್ಲಿ ಶಾಸಕ ಡಾ. ಚಂದ್ರು ಲಮಾಣಿ

# ಬೆಳೆ ಸಮೀಕ್ಷೆ ಪಾರದರ್ಶಕವಾಗಿ ನಡೆಯುತ್ತಿಲ್ಲ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮತಕ್ಷೇತ್ರ ವ್ಯಾಪ್ತಿಯಲ್ಲಿ ರೈತರು ಪ್ರಕೃತಿ ವಿಕೋಪದಿಂದ ಸತತವಾಗಿ ಹಾನಿಯನ್ನು ಅನುಭವಿಸುತ್ತಿದ್ದು, ಇವುಗಳ ನೈಜ ಮಾಹಿತಿಯನ್ನು ವರದಿ ಮಾಡಬೇಕಾದ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದರೆ, ಬೆಳೆ–ಹಾನಿ ಮತ್ತು ಬೆಳೆ ಸಮೀಕ್ಷೆ ವರದಿಯಲ್ಲಿ ಲೋಪದೋಷವಾದರೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳನ್ನೇ ಹೊಣೆಗಾರರನ್ನಾಗಿಸಲಾಗುವುದು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಮಂಗಳವಾರ ಶಿರಹಟ್ಟಿಯ ತಾಲೂಕು ಪಂಚಾಯಿತಿ ಸಭಾ ಭವನದಲ್ಲಿ ಜರುಗಿದ ಸಾಮಾನ್ಯ ಸಭೆಯಲ್ಲಿ ಮಾತನಾಡಿದರು. ಕಂದಾಯ, ಕೃಷಿ ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳ ಜಂಟಿ ಸಮೀಕ್ಷೆಯಲ್ಲಿ ನಡೆಯುವ ಬೆಳೆ ಸಮೀಕ್ಷೆಯು ಪಾರದರ್ಶಕವಾಗಿ ನಡೆಯುತ್ತಿಲ್ಲ. ಇದರ ಬಗ್ಗೆ ಅನೇಕ ದೂರುಗಳು ಕೇಳಿ ಬರುತ್ತಿದ್ದು, ನೀವು ನೋಡಲ್ ಅಧಿಕಾರಿಯಾಗಿ ಯಾಕೆ ಸಮರ್ಪಕ ಪರಿಶೀಲನೆ ನಡೆಸುತ್ತಿಲ್ಲ, ಸಮೀಕ್ಷೆಯಲ್ಲಿ ವ್ಯತ್ಯಾಸವಾದರೆ ನಿಮ್ಮನ್ನೇ ಜವಾಬ್ದಾರಿ




> ತಾಲೂಕಾ ಕೇಂದ್ರದಲ್ಲಿ ನಡೆಯುವ ಬಹುತೇಕ ಅಧಿಕಾರಿ ಗೈರು ಉಳಿಯುತ್ತಿರುವುದನ್ನು ನಾನು ಗಮನಿಸಿದ್ದೇನೆ. ಸರಕಾರದ ಶಿಷ್ಟಾಚಾರದ ಪ್ರಕಾರ ಅಧಿಕಾರಿಗಳು ಕಾರ್ಯಕ್ರಮಗಳಲ್ಲಿ ಭಾಗಿಯಾಗಬೇಕು. ಎಲ್ಲ ಅಧಿಕಾರಿಗಳು ಎಲ್ಲ ಸರಕಾರಿ ಕಾರ್ಯಕ್ರಮಗಳಲ್ಲಿ ಕಡ್ಡಾಯವಾಗಿ ಭಾಗಿಯಾಗಬೇಕೆಂದು ಶಾಸಕ ಡಾ: ಲಮಾಣಿ ಹೇಳಿದರು.

ಮಾಡಲಾಗುವುದು ಎಂದು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ರೇವಣೆಪ್ಪ ಮನಗೂಳಿ ಅವರನ್ನು ಕೇಳಿದಾಗ ಸಭೆಯಲ್ಲಿ ಕೆಲಕಾಲ ಗೊಂದಲ ಸೃಷ್ಟಿಯಾಗಿ ಶಾಸಕ ಮತ್ತು ಎಡಿಎ ನಡುವೆ ಮಾತಿನ ಚಕಮಕಿ ನಡೆದು ಕೊನೆಗೆ ಎಡಿಎ ಸಭೆಯಿಂದ ಹೊರಕ್ಕೆ ಹೋಗುವಂತೆ ಶಾಸಕ ಡಾ ಲಮಾಣಿ ಸೂಚನೆ ನೀಡಿದರು. ತಾಲೂಕಿನ ನೋಡಲ್ ಅಧಿಕಾರಿ ಇದಕ್ಕೆ ನಾನು ಜವಾಬ್ದಾರಿಯಲ್ಲ ಎನ್ನುತ್ತಿದ್ದು, ನಮ್ಮ ತಾಲೂಕಿಗೆ ಬೇರೆ ನೋಡಲ್ ಅಧಿಕಾರಿಯನ್ನು ನೇಮಕ ಮಾಡಬೇಕೆಂದು ಕೃಷಿ ಇಲಾಖೆಯ ಜೆಡಿ ಮತ್ತು ಡಿಡಿ ಅವರಿಗೆ ಪತ್ರ ಬರೆಯಲು ಸೂಚಿಸಿದರು. ಜಿ.ಪಂ ಮುಖ್ಯ ಯೋಜನಾಧಿಕಾರಿ ಹಾಗೂ ತಾ.ಪಂ ಆಡಳಿತಾಧಿಕಾರಿ ಸಿ.ಆರ್. ಮುಂಡರಗಿ, ತಾ.ಪಂ ಇಓ ಡಾ. ಆರ್.ವಿ. ದೊಡ್ಡಮನಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಗಣೇಶ ಹಬ್ಬ; ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗ'ದ'ಗ'–ಬ'ಟಗ'ೀರಿ ನಗರದ ಸಾರ್ವಜನಿಕರಲ್ಲಿ ವಿನಂತಿಸಿಕೊಳ್ಳುವುದೇನೆಂದರೆ, ನಗರದಲ್ಲಿ ಗಣೇಶನ ವಿಸರ್ಜನೆ ಮಾಡುವ ಸಮಯದಲ್ಲಿ ಆಗುತ್ತಿರುವ ಪರಿಸರ ಮಾಲಿನ್ಯ ಕುರಿತು ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಬೆಂಗಳೂರು ಇವರು ಅನೇಕ ಸೂಕ್ತ ಸಲಹೆ ಹಾಗೂ ಮಾರ್ಗಸೂಚನೆಗಳನ್ನು ನೀಡಿದ ಪ್ರಯುಕ್ತ ಗದಗ–ಬೆಟಗೇರಿ ಅವಳಿ ನಗರದ ಮದ್ಯಭಾಗದಲ್ಲಿರುವ ಬೆಟಗೇರಿ ಭಾಗದ ಅಶೋಕ ರಸ್ತೆ ಡಾ. ನೇರ್ಲೆಕರ್ ದವಾಖಾನೆ ಎದುರಿಗೆ ನಗರಸಭೆಯಿಂದ ಕಟ್ಟಿದ ಟ್ಯಾಂಕಿನಲ್ಲಿ, ಹುಬ್ಬಳ್ಳಿ ರಸ್ತೆ ಮಾನ್ವಿ ಹಳ್ಳದ ಹತ್ತಿರ ಮಾನ್ವಿ ಅವರ ತರೆದ ಬಾವಿ (ರಿಂಗ್ ರೋಡ್‌ಗೆ ಹೊಂದಿಕೊಂಡಿರುವ) ಗದಗ ಬೆಟಗೇರಿ ಅವಳಿ ನಗರದ ಸಾರ್ವಜನಿಕರು ಹಾಗೂ ಸಂಘ ಸಂಸ್ಥೆಗಳವರು ಗಣೇಶ ಮೂರ್ತಿಗಳನ್ನು ವಿಸರ್ಜಿಸಲು ಹಾಗೂ ನಗರದ ಮನೆಗಳಲ್ಲಿ ಪ್ರತಿಷ್ಠಾಪಿಸಿರುವ ಗಣೇಶನ ವಿಗ್ರಹಗಳನ್ನು ವಿಸರ್ಜಿಸಲು ಹುಡ್ಕೋ ಕಾಲೋನಿ ಶ್ರೀ ಹುಣಸೀಮರದ ಶಾಲೆ ಹತ್ತಿರ ; ಹುಡ್ಕೋ ಕಾಲೋನಿ ಗಾರ್ಡನ್ ಹತ್ತಿರ, ಆದರ್ಶ ನಗರ, ಖಾನತೋಟ ಭಾವಿ ಹತ್ತಿರ, ಹಾಲಕೆರೆ ಮಠದ ಹತ್ತಿರ, ಡಿ ಸಿ ಮಿಲ್ಲ ಕಾಂಪೌಂಡ್ ಹತ್ತಿರ, ಬಸವೇಶ್ವರ ನಗರ ಕರ್ನಾಟಕ ಚಿತ್ರಮಂದಿರ ಹಿಂದೆ , ವಿಠೋಬ ದೇವರ ಗುಡಿ ಹತ್ತಿರ, ಜರ್ಮನ್ ದವಾಖಾನೆ ಹತ್ತಿರ ಬೆಟಗೇರಿ, ಮಸಾರಿ ಭಾಗದ ವಿವೇಕಾನಂದ ನಗರದಲ್ಲಿ ಈ ಎಲ್ಲ ಕಡೆಗಳಲ್ಲಿ ನೀರಿನ ತೊಟ್ಟಿಗಳನ್ನು ಕಟ್ಟಿದ್ದು ಗದಗ–ಬೆಟಗೇರಿ ಅವಳಿ ನಗರದ ಸಾರ್ವಜನಿಕರು ಹಾಗೂ ಸಂಘ ಸಂಸ್ಥೆಗಳವರು ಗಣೇಶ ಮೂರ್ತಿಗಳನ್ನು ಮೇಲ್ಕಾಣಿಸಿದ ನಿಗದಿಪಡಿಸಿದ ಸ್ಥಳಗಳಲ್ಲಿ ವಿಸರ್ಜಿಸಬೇಕು.

ಟ್ಯಾಂಕ್ ಬಾವಿಗಳಲ್ಲಿ ಪ್ಲಾಸ್ಟಿಕ್ ಹೂವು ದಾರ ಇನ್ನಿತರ ಯಾವುದೇ ವಸ್ತರುಗಳನ್ನು ನೀರಿನಲ್ಲಿ ಹಾಕದೆ ನಗರಸಭೆಯಿಂದ ಇಡಲಾದ ಕಂಟೇನರಗಳಲ್ಲಿಯೇ ಪ್ಲಾಸ್ಟಿಕ್ ಹೂವು ದಾರ ಹಾಕಿ ಪರಿಸರ ಮಾಲಿನ್ಯವಾಗದಂತೆ ತಡೆಯಲು ನಗರಸಭೆಯೊಂದಿಗೆ ಸಹಕರಿಸಬೇಕೆಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

# ಸಾರ್ವಜನಿಕರ ಸುರಕ್ಷತೆಗೆ ಪ್ರಥಮಾದ್ಯತೆ ನೀಡಿ



■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಿಂದ ಸಾಕಷ್ಟು ಮಳೆಯಾಗುತ್ತಿದ್ದು, ಮಳೆಯಿಂದ ಹಾನಿಗೊಳಗಾಗುವ ಪ್ರದೇಶಗಳ ಸಾರ್ವಜನಿಕರ ಸುರಕ್ಷತೆಗೆ ಪ್ರಥಮಾದ್ಯತೆ ನೀಡಿ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜರುಗಿದ ಮುಂಗಾರು ಹಂಗಾಮು ಪರಿಸ್ಥಿತಿ ಕುರಿತು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾದಿಕಾರದ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರವಾಹ ಪರಿಸ್ಥಿತಿಯನ್ನು ಅತ್ಯಂತ ಅಚ್ಚುಕಟ್ಟಾಗಿ ನಿರ್ವಹಿಸಲು ಎಲ್ಲ ಅಧಿಕಾರಿಗಳು ಸನ್ನದ್ಧರಾಗಬೇಕು. ಅತಿವೃಷ್ಟಿಯಿಂದ ಉಂಟಾಗುವ ಸಾರ್ವಜನಿಕರ ಆಸ್ತಿ–ಪಾಸ್ತಿ ಹಾನಿ ತಪ್ಪಿಸಲು ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ಅಧಿಕ ಪ್ರಮಾಣದ ಮಳೆ ಸುರಿದಲ್ಲಿ ತಕ್ಷಣ ಅಧಿಕಾರಿಗಳು ಗುರುತಿಸಲಾದ ಪ್ರದೇಶಗಳಿಗೆ ಭೇಟಿ ನೀಡಿ ಪರಿಸ್ಥಿತಿ ನಿಯಂತ್ರಣ ಕುರಿತಂತೆ ಕ್ರಮ ವಹಿಸಬೇಕು. ಪ್ರವಾಹ ಸಂಭವಿಸಬಹುದಾದ 43 ಗ್ರಾಮಗಳನ್ನು ಗುರುತಿಸಲಾಗಿದ್ದು, ಮುಂಜಾಗ್ರತೆಯಾಗಿ ಆ ಭಾಗದ ಅಧಿಕಾರಿಗಳು ಜೀವ ಹಾನಿ ತಡೆಗೆ ನಿರಂತರ ನಿಗಾ ವಹಿಸಬೇಕು ಎಂದು ಸೂಚಿಸಿದರು.

ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಮಾತನಾಡಿ, ಪ್ರವಾಹ ಪರಿಸ್ಥಿತಿ

▸▸ 3ನೇ ಪುಟಕ್ಕೆ

> ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಜಿ.ಎಚ್ ಮಾತನಾಡಿ, ಜಿಲ್ಲೆಯಲ್ಲಿ 1–1–2025 ರಿಂದ 25–8–2025ರವರೆಗೆ 326 ಮಿ.ಮೀ ವಾಡಿಕೆ ಮಳೆ ಇದ್ದು 477 ಮಿ.ಮೀ ಮಳೆ ಆಗಿರುತ್ತದೆ. ಜಿಲ್ಲೆಯಲ್ಲಿ ಶೇ.46 ಹೆಚ್ಚುವರಿ ಮಳೆಯಾಗಿದೆ ಎಂದು ಸಭೆಗೆ ತಿಳಿಸಿದರು.

## ಸಂಪಾದಕೀಯ

# ಕಾಲೇಜುಗಳ ಅಭಿವೃದ್ಧಿಗೂ ಸಾಲ?

ದ್ವಿಭಾಷಾ ನೀತಿ: ಹಿಂದಿ ಶಿಕ್ಷಕರ ಮೇಲೆ ಪರಿಣಾಮ?

ಕರ್ನಾಟಕದ ಶಿಕ್ಷಣ ವ್ಯವಸ್ಥೆಯಲ್ಲಿ ದ್ವಿಭಾಷಾ ನೀತಿಯನ್ನು ಜಾರಿಗೆ ತಂದರೆ, ಸಾವಿರಾರು ಹಿಂದಿ ಶಿಕ್ಷಕರ ಭವಿಷ್ಯ ಅನಿಶ್ಚಿತವಾಗಲಿದೆ.

ಪ್ರಸ್ತುತ, ರಾಜ್ಯದ ಶಾಲೆಗಳಲ್ಲಿ ಆರನೇ ತರಗತಿಯಿಂದ ಹಿಂದಿಯನ್ನು ಮೂರನೇ ಭಾಷೆಯಾಗಿ ಕಲಿಸಲಾಗುತ್ತಿದ್ದು, ಸುಮಾರು 25,500 ಕಾಯಂ ಹಿಂದಿ ಶಿಕ್ಷಕರು ಸೇವೆ ಸಲ್ಲಿಸುತ್ತಿದ್ದಾರೆ. ಇದರ ಜೊತೆಗೆ, ಸುಮಾರು 1,200 ಉಪನ್ಯಾಸಕರು ಮತ್ತು ಸಾವಿರಾರು ಅತಿಥಿ ಶಿಕ್ಷಕರೂ ಇದ್ದಾರೆ. ಇಷ್ಟೇ ಅಲ್ಲದೆ, ಹಿಂದಿಯಲ್ಲಿ ಪರಿಣತಿ ಪಡೆದ ಸುಮಾರು 6,800 ಬಿ.ಎಡ್ ಪದವೀಧರರು ಸರ್ಕಾರಿ ಉದ್ಯೋಗದ ನಿರೀಕ್ಷೆಯಲ್ಲಿದ್ದಾರೆ.

ಒಂದು ವೇಳೆ ಸರ್ಕಾರವು ದ್ವಿಭಾಷಾ ನೀತಿಯನ್ನು ಜಾರಿಗೆ ತಂದರೆ, ಈ ಸುಮಾರು 40,000 ಶಿಕ್ಷಕರು ಮತ್ತು ಉದ್ಯೋಗಾಕಾಂಕ್ಷಿಗಳ ಜೀವನೋಪಾಯಕ್ಕೆ ಭಾರಿ ಹೊಡೆತ ಬೀಳಲಿದೆ. ಕರ್ನಾಟಕ ಹಿಂದಿ ಶಿಕ್ಷಕರ ಸಂಘದ ಅಧ್ಯಕ್ಷ ಶಶಿಧರ್ ಅವರ ಪ್ರಕಾರ, ನಮ್ಮ ಮಾತೃಭಾಷೆ ಕನ್ನಡವಾಗಿದ್ದರೂ, ನಮ್ಮ ವೃತ್ತಿ ಹಿಂದಿಯೊಂದಿಗೆ ಬೆಸೆದುಕೊಂಡಿದೆ. ದ್ವಿಭಾಷಾ ನೀತಿಯು ಸಾವಿರಾರು ಕುಟುಂಬಗಳನ್ನು ಸಂಕಷ್ಟಕ್ಕೆ ತಳ್ಳುತ್ತದೆ ಎಂದಿದ್ದಾರೆ.

ಈ ಹೇಳಿಕೆಗಳು ಕೇವಲ ವೃತ್ತಿಪರ ಆತಂಕ ಮಾತ್ರವಲ್ಲ, ಇದು ಸಾಮಾಜಿಕ ಮತ್ತು ಆರ್ಥಿಕ ಕಾಳಜಿಯನ್ನೂ ಒಳಗೊಂಡಿದೆ. ಕನ್ನಡ ಭಾಷೆಗೆ ಪ್ರಾಮುಖ್ಯತೆ ನೀಡುವುದು ಅವಶ್ಯಕವಾದರೂ, ಈಗಾಗಲೇ ಇರುವ ಶಿಕ್ಷಕರನ್ನು ನಿರ್ಲಕ್ಷಿಸುವುದು ಸರಿಯಲ್ಲ.


ಸರ್ಕಾರದ ನಿರ್ಧಾರವು ಭಾಷಾ ನೀತಿ ಮತ್ತು ಜನರ ಉದ್ಯೋಗ ಭದ್ರತೆಯ ನಡುವೆ ಸಮತೋಲನ ಕಾಯ್ದುಕೊಳ್ಳಬೇಕಿದೆ. ಭಾಷಾ ನೀತಿ ಜಾರಿಯ ಮೊದಲು, ಸರ್ಕಾರವು ಹಿಂದಿ ಶಿಕ್ಷಕರ ಭವಿಷ್ಯದ ಬಗ್ಗೆ ಸ್ಪಷ್ಟವಾದ ಯೋಜನೆಯನ್ನು ರೂಪಿಸುವುದು ಅನಿವಾರ್ಯವಾಗಿದೆ. ಇಲ್ಲವಾದರೆ, ಒಂದು ಉತ್ತಮ ಉದ್ದೇಶವು ಇನ್ನೊಂದು ದೊಡ್ಡ ಸಮಸ್ಯೆಗೆ ಕಾರಣವಾಗಬಹುದು.

## ಆಗಸ್ಟ್ 27, ಗಣೇಶ ಚತುರ್ಥಿ ಆಚರಣೆಯ ನಿಮಿತ್ತ ವಿಶೇಷ ಲೇಖನ

# ಪರಿಸರ ಸ್ನೇಹಿ ಗಣೇಶನನ್ನು ಪ್ರತಿಷ್ಠಾಪಿಸಿ

ಭಾರತೀಯರ ಹಿಂದೂ ಪಂಚಾಂಗದ ಪ್ರಕಾರ ಪ್ರತಿ ವರ್ಷ ಭಾದ್ರಪದ ಮಾಸ ಶುಕ್ಲ ಪಕ್ಷದ ಚೌತಿಯಂದು ಗಣೇಶ ಚತುರ್ಥಿಯನ್ನು ಆಚರಿಸಲಾಗುವುದು. ಈ ವರ್ಷ ಆಗಸ್ಟ್ 27ರಂದು ಗಣೇಶ ಚತುರ್ಥಿಯನ್ನು ಆಚರಿಸಲಾಗುತ್ತಿದೆ. ಈ ಹಬ್ಬದಲ್ಲಿ ಬೆಳ್ಳಿ ಗಣೇಶ ಅಥವಾ ಮಣ್ಣಿನಿಂದ ಮಾಡಿದ ಗಣೇಶ ಮೂರ್ತಿಯನ್ನು ಇಟ್ಟು, ಹಬ್ಬವನ್ನು ಆಚರಿಸಲಾಗುತ್ತದೆ. ಗಣೇಶನು ತಿಂಡಿ ಪ್ರಿಯ, ಹಾಗಾಗಿ ಅವನಿಗೆ ಇಷ್ಟವಾಗುವ ಮೋದಕ, ಕಡಬು, ಚಕ್ಕಲಿ, ಕೋಡುಬಳೆ ಸೇರಿದಂತೆ ವಿವಿಧ ಬಗೆಯ ತಿಂಡಿಗಳನ್ನು ಮಾಡಿ, ನೈವೈದ್ಯಕ್ಕೆ ಇಡುತ್ತಾರೆ.

ಗಣೇಶನ ಮೂರ್ತಿಯನ್ನು ಕೇವಲ ಮನೆಯಲ್ಲಿ ಮಾತ್ರವಲ್ಲ, ಶಾಲಾ-ಕಾಲೇಜು, ಕಚೇರಿಗಳಲ್ಲಿ ಹಾಗೂ ವಿವಿಧ ಸಂಘ-ಸಂಸ್ಥೆಗಳಲ್ಲೂ ವಿವಿಧ ಗಾತ್ರದ ಗಣೇಶನನ್ನು ಇಟ್ಟು ಪೂಜೆ ಮಾಡಲಾಗುತ್ತದೆ. ಮಹಾರಾಷ್ಟ್ರದಲ್ಲಿ ಸ್ವಾತಂತ್ರ್ಯ ಸಂಗ್ರಾಮದ ಸಮಯದಲ್ಲಿ ಸಾರ್ವಜನಿಕರನ್ನು ಒಗ್ಗೂಡಿಸಲು ಆರಂಭಿಸಿದ ಸಾರ್ವಜನಿಕ ಗಣಪತಿ ಪೂಜೆ ಇಂದಿಗೂ ಹಾಗೆಯೇ



ಮುಂದುವರೆಯುತ್ತಿದೆ.

ಯಾಜ್ಞವಲ್ಕ್ಯ ಸ್ಮೃತಿಯ ಪ್ರಕಾರ ಅಂಬಿಕೆಯು ಗಣಪತಿಯ ತಾಯಿ. ಇನ್ನೊಂದು ಕಥೆಯ ಪ್ರಕಾರ ಆತನು ಪಾರ್ವತಿಯ ಮೈಯಿಂದ ಹುಟ್ಟಿದವನು. ಸ್ವರ್ಣಗೌರಿಯ ಮಾನಸ ಪುತ್ರ ಈತ. ಗೌರಿ ತನ್ನ ಮೈಕೊಳೆಯಿಂದ ಆಕೃತಿಯೊಂದನ್ನು ಸೃಷ್ಟಿಸಿ ಅದಕ್ಕೆ ಜೀವತುಂಬಿ ಸ್ನಾನ ಮಾಡಲು ಹೋಗಿರುತ್ತಾಳೆ. ತಾಯಿಯ ಅಣತಿಯಂತೆ ಗಣಪ ಮನೆಯನ್ನು ಕಾಯುತ್ತಿರುತ್ತಾನೆ. ಶಿವನು ಮನೆಗೆ ಹಿಂತಿರುಗಿದಾಗ, ಗಣಪ ಅವನನ್ನು ತಡೆದು ಮನೆಯೊಳಗೆ ಹೋಗಲು ಅಡ್ಡಿಪಡಿಸುತ್ತಾನೆ. ಇದರಿಂದ ಕುಪಿತಗೊಂಡ ಶಿವ ತನ್ನ ತ್ರಿಶೂಲದಿಂದ ಅವನ ಶಿರವನ್ನು ಕತ್ತರಿಸುವನು. ಸ್ನಾನ ಮುಗಿಸಿ ಬಂದ ಗೌರಿ ಮಗನ ಕಳೇಬರ ಕಂಡು ರೋದಿಸುತ್ತಾಳೆ. ಹೆಂಡತಿಯನ್ನು ಸಮಾಧಾನ ಪಡಿಸುವ ಸಲುವಾಗಿ ಶಿವ ತನ್ನ ಗಣಗಳನ್ನು ಕರೆದು ಉತ್ತರ ದಿಕ್ಕಿಗೆ ಯಾರಾದರೂ ತಲೆ ಹಾಕಿ ಮಲಗಿದ್ದರೆ, ಅಂತಹವರ ತಲೆಯನ್ನು ಕತ್ತರಿಸಿ ತರುವಂತೆ ಆಜ್ಞಾಪಿಸುತ್ತಾನೆ. ಅವರು ಉತ್ತರ ದಿಕ್ಕಿನಲ್ಲಿ ಮಲಗಿದ್ದ ಮರಿಯಾನೆ ತಲೆಯನ್ನು ಕತ್ತರಿಸಿ ತರುತ್ತಾರೆ. ನಂತರ ಅದನ್ನು ಗಣಪನ ಶರೀರಕ್ಕೆ ಅಂಟಿಸಿದರು. ಹೀಗಾಗಿ ಗಣಪ ಗಜಮುಖನಾದ.

ಗೌರಿ-ಗಣೇಶ ಹಬ್ಬದ ಪ್ರಯುಕ್ತ ಬಣ್ಣದಿಂದ ತಯಾರಿಸಿರುವ ಗೌರಿ ಹಾಗು ಗಣೇಶನ ವಿಗ್ರಹಗಳನ್ನು ಪ್ರತಿಷ್ಠಾಪಿಸಿ, ಪೂಜಿಸಿ ಕೆರೆ, ಬಾವಿ ಹಾಗೂ ಇತರೆ ನೈಸರ್ಗಿಕ ಜಲಮೂಲಗಳಿಗೆ ವಿಸರ್ಜಿಸುವುದರಿಂದ ನೀರು ಕಲುಷಿತವಾಗಿ, ಜಲಚರಗಳಿಗೆ ಹಾನಿಯುಂಟಾಗುತ್ತದೆ. ಇದನ್ನು ತಪ್ಪಿಸಲು ಜೇಡಿ ಮಣ್ಣಿನಿಂದ ಹಾಗೂ ನೈಸರ್ಗಿಕ ಬಣ್ಣಗಳಿಂದ ತಯಾರಿಸಿದ ಮೂರ್ತಿಗಳನ್ನು ಪ್ರತಿಷ್ಠಾಪಿಸಿ, ಗೌರಿ-ಗಣೇಶ ಚರ್ತುರ್ಥಿ ಆಚರಣೆಯನ್ನು ಪರಿಸರ ಸ್ನೇಹಿಯಾಗಿ ಆಚರಿಸುವಂತೆ ಪರಿಸರ ಪ್ರೇಮಿಗಳು ಸಾರ್ವಜನಿಕರಲ್ಲಿ ಮನವಿ ಮಾಡುತ್ತಾರೆ.

ಪಿಓಪಿ ಅಥವಾ ಬಣ್ಣವನ್ನು ಬಳಸಿದ ಮೂರ್ತಿಗಳನ್ನು ನೇರವಾಗಿ ಹೊಂಡ, ನದಿಗಳಿಗೆ ಬಿಡದೆ ಬಕೆಟ್‌ನಲ್ಲಿ ವಿಸರ್ಜಿಸಬೇಕು ಅಥವಾ ಮೂರ್ತಿಗಳನ್ನು ವಿಸರ್ಜಿಸಲು ಕಲ್ಯಾಣಿಗಳು ತಾತ್ಕಾಲಿಕ ಹೊಂಡಗಳನ್ನು ನಿರ್ಮಿಸಿ ಅದರಲ್ಲಿ ಮೂರ್ತಿಗಳನ್ನು ವಿಸರ್ಜಿಸುವುದು. ಸೂಚಿತ ಕೆರೆಗಳಲ್ಲಿ ವಿಸರ್ಜಿಸುವ ಮುನ್ನ ಹೂವು, ವಸ್ತ್ರ, ಪ್ಲಾಸ್ಟಿಕ್ ಹಾರ ಎಲ್ಲವನ್ನೂ ತೆಗೆದು ನಂತರ ಮೂರ್ತಿಯನ್ನು ವಿಸರ್ಜನೆ ಮಾಡಬೇಕು.

ಬಾವಿ, ಕೆರೆ ಹಾಗೂ ಹೊಳೆಗಳಲ್ಲಿ ಗಣಪತಿ ವಿಗ್ರಹಗಳನ್ನು ವಿಸರ್ಜನೆ ಮಾಡುವುದರಿಂದ ಅಂತರ್ಜಲ, ಕುಡಿಯುವ ನೀರಿನ ಸೆಲೆಗಳು ಕಲುಷಿತವಾಗಿ ಪರಿಸರಕ್ಕೆ ಹಾನಿಯಾಗುತ್ತದೆ. ಈ ಎಲ್ಲಾ ತಪ್ಪುಗಳಿಂದ ಪರಿಸರ ಮಾಲಿನ್ಯ ಉಂಟಾಗುವುದು ಸಹಜ. ಹೀಗಾಗಿ ನಾವು ಎಚ್ಚೆತ್ತುಕೊಂಡು, ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳಬೇಕು.

ಒಟ್ಟಾರೆಯಾಗಿ ನಮ್ಮ ಸಂತೋಷದ ಸಲುವಾಗಿ ಗಣೇಶ ಹಬ್ಬದ ಆಚರಣೆ ನಮಗೆ ನೋವನ್ನು ತರಬಾರದು. ಹಾಗಾಗಿ ನಾವು ಒಂದಿಷ್ಟು ಒಳ್ಳೆಯ ಕೆಲಸ ಹಾಗೂ ಪ್ರತಿಜ್ಞೆಯ ಮೂಲಕ ಹಬ್ಬದ ಆಚರಣೆ ಮಾಡುವುದು ಸೂಕ್ತ. ಅದರಿಂದ ಆರೋಗ್ಯಕರ ಹಬ್ಬದ ಆಚರಣೆ ನಮ್ಮದಾಗುವುದು. ಗಣೇಶ ಹಬ್ಬದಲ್ಲಿ ರಸ್ತೆ ಬದಿಯಲ್ಲಿ ಹಾಗೂ ಚರಂಡಿಯಲ್ಲಿ ಕಸಗಳನ್ನು ಎಸೆಯದೇ ಕಸದ ಡಬ್ಬಿಗಳಿಗೆ ಹಾಕುವಂತೆ ಜಾಗೃತಿ ಅರಿವು ಮೂಡಿಸುವುದು ಪ್ರಜ್ಞಾವಂತ ನಾಗರಿಕರ ಕರ್ತವ್ಯವಾಗಬೇಕು. ಏನಂತೀರಿ..?



– ಬಸವರಾಜ ಎಮ್.ಯರಗುಪ್ಪಿ.
ಶಿಕ್ಷಕರು, ಹವ್ಯಾಸಿ ಬರಹಗಾರರು.
ಲಕ್ಷ್ಮೇಶ್ವರ.

# ಕಸಾಯಿಖಾನೆ, ಮಾಂಸ ಮಾರಾಟ ಬಂದ್

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯ ಬರುವ ಕಸಾಯಿಖಾನೆಗಳಲ್ಲಿ ಪ್ರಾಣಿವಧೆ ಹಾಗೂ ಮಾಂಸ ಮಾರಾಟಗಾರರಿಗೆ ತಿಳಿಯಪಡಿಸುವುದೇನೆಂದರೆ ಗಣೇಶ ಚತುರ್ಥಿ ಅಂಗವಾಗಿ ಆಗಸ್ಟ್ 27 ರಂದು ಜಾನುವಾರುಗಳ ವಧೆ ಹಾಗೂ ಮಾಂಸ ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ. ಮಾಂಸ ಮಾರಾಟ ಮಾಡುವದಾಗಲಿ ಹಾಗೂ ಜಾನುವಾರುಗಳನ್ನು ವಧೆ ಮಾಡದಿರಲು ಸೂಚಿಸಲಾಗಿದೆ.

ಈ ಆದೇಶವನ್ನು ಉಲ್ಲಂಘಿಸಿದಲ್ಲಿ ಅಂಥವರ ಲೈಸನ್ಸ್ ರದ್ದು ಮಾಡಲಾಗುವುದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿಜೆಪಿ ನಾಯಕ ಅಣ್ಣಾಮಲೈಯಿಂದ ಪದಕ ಹಾಕಿಸಿಕೊಳ್ಳಲು ನಿರಾಕರಿಸಿದ ತಮಿಳುನಾಡು ಸಚಿವರ ಮಗ

■ ವಿಜಯಸಾಕ್ಷಿ ಸುದ್ದಿ, ತಮಿಳನಾಡು

ತಮಿಳುನಾಡಿನ ಕೈಗಾರಿಕಾ ಸಚಿವ ಟಿಆರ್‌ಬಿ ರಾಜಾ ಅವರ ಮಗ ಸೂರ್ಯ ರಾಜ ಬಾಲು ಅವರು, 51ನೇ ರಾಜ್ಯ ಶೂಟಿಂಗ್ ಕ್ರೀಡಾಕೂಟದಲ್ಲಿ ಬಿಜೆಪಿ ನಾಯಕ ಕೆ ಅಣ್ಣಾಮಲೈ ಅವರಿಂದ ಕುತ್ತಿಗೆಗೆ ಪದಕ ಹಾಕಿಸಿಕೊಳ್ಳಲು ನಿರಾಕರಿಸಿದ್ದು, ಪದಕವನ್ನು ಕೈಯಲ್ಲಿ ಸ್ವೀಕರಿಸಿದ್ದಾರೆ.

ಕ್ರೀಡಾಕೂಟದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಅಣ್ಣಾಮಲೈ ವಿಜೇತರ ಕತ್ತಿಗೆ ಪದಕ ಹಾಕುತ್ತಿದ್ದರು. ಆದರೆ, ಸೂರ್ಯ ಅವರು ಕತ್ತಿಗೆ ಪದಕ ಹಾಕಿಸಿಕೊಳ್ಳಲು ನಿರಾಕರಿಸಿದ್ದಾರೆ. ಈ ಕುರಿತ ವಿಡಿಯೋ ವೈರಲ್ ಆಗಿದೆ. ಎರಡು ವಾರಗಳ ಹಿಂದೆ ಇದೇ ರೀತಿಯ ಘಟನೆ ತಿರುನಲ್ವೇಲಿಯಲ್ಲಿ ನಡೆದಿತ್ತು. ಅಲ್ಲಿನ ಮನೋನ್ಮಣಿಯಂ ಸುಂದರನಾರ್ ವಿಶ್ವವಿದ್ಯಾಲಯದ 32ನೇ ಘಟಿಕೋತ್ಸವದಲ್ಲಿ ಪಿಎಚ್‌ಡಿ ವಿದ್ಯಾರ್ಥಿನಿ ಜೀನ್ ಜೋಸೆಫ್ ಅವರು ರಾಜ್ಯಪಾಲ ಆರ್.ಎನ್. ರವಿ ಅವರಿಂದ ಪ್ರಮಾಣಪತ್ರ ಸ್ವೀಕರಿಸಲು ನಿರಾಕರಿಸಿದ್ದರು. ಬದಲಾಗಿ ವಿವಿಯ ಉಪಕುಲಪತಿಯಿಂದ ಪ್ರಮಾಣಪತ್ರ ಪಡೆದಿದ್ದರು.

# ಭಾರತದ ಮೇಲೆ ಶೇ.50ರಷ್ಟು ಸುಂಕ ವಿಧಿಸಲು ಅಮೆರಿಕ ಅಧಿಸೂಚನೆ: ಆಗಸ್ಟ್ 27ರಿಂದ ಜಾರಿ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಭಾರತೀಯ ಸರಕುಗಳ ಮೇಲಿನ ಆಮದು ಸುಂಕವನ್ನು ಶೇಕಡ 50ಕ್ಕೆ ಹೆಚ್ಚಿಸುವುದಾಗಿ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕಳೆದ ತಿಂಗಳು ಘೋಷಿಸಿದ್ದರು. ಅದರಂತೆ, ಭಾರತದಿಂದ ಆಮದು ಮಾಡಿಕೊಳ್ಳುವ ಉತ್ಪನ್ನಗಳ ಮೇಲೆ ಹೆಚ್ಚುವರಿ ಸುಂಕಗಳನ್ನು ಜಾರಿಗೆ ತರುವ ಕುರಿತು ಅಮೆರಿಕದ ಕಸ್ಟಮ್ಸ್ ಮತ್ತು ಗಡಿ ರಕ್ಷಣೆ (ಸಿಬಿಪಿ) ಕರಡು ಅಧಿಸೂಚನೆ ಹೊರಡಿಸಿದೆ ಎಂದು ವರದಿಯಾಗಿದೆ.

"ರಷ್ಯನ್ ಒಕ್ಕೂಟದ ಸರ್ಕಾರದಿಂದ ಯುನೈಟೆಡ್ ಸ್ಟೇಟ್ಸ್‌ಗೆ ಇರುವ ಬೆದರಿಕೆಗಳನ್ನು ಪರಿಹರಿಸುವುದು" ಎಂಬ ಶೀರ್ಷಿಕೆಯ, ಆಗಸ್ಟ್ 6, 2025ರಂದು ಟ್ರಂಪ್ ಸಹಿ ಹಾಕಿದ ಕಾರ್ಯಕಾರಿ ಆದೇಶ ಸಂಖ್ಯೆ 14329 ಅನ್ನು ಜಾರಿಗೆ ತರಲು ಹೆಚ್ಚುವರಿ ಸುಂಕಗಳನ್ನು ವಿಧಿಸಲಾಗುತ್ತಿದೆ ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ. ಅಧಿಸೂಚನೆಯು ಭಾರತದ ಉತ್ಪನ್ನಗಳಾದ ವಸ್ತುಗಳ ಆಮದಿನ ಮೇಲೆ ಹೊಸ ಸುಂಕ ದರವನ್ನು ನಿರ್ದಿಷ್ಟಪಡಿಸಿದೆ ಎಂದು ವರದಿಗಳು ಹೇಳಿವೆ. ಆಗಸ್ಟ್ 27, 2025ರಂದು ಪ್ರಕಟಿಸಲು ನಿರ್ಧರಿಸಲಾದ ಕರಡು ಅಧಿಸೂಚನೆಯಲ್ಲಿ, ಟ್ರಂಪ್ ಅವರ ಕಾರ್ಯಕಾರಿ ಆದೇಶಕ್ಕೆ ಅನುಗುಣವಾಗಿ ಯುನೈಟೆಡ್ ಸ್ಟೇಟ್ಸ್‌ನ ಹಾರ್ಮೋನೈಸ್ಡ್ ಟ್ಯಾರಿಫ್ ವೇಳಾಪಟ್ಟಿಯನ್ನು ( ಊ ಖ ಖ ಗ ಖ ) ಮಾರ್ಪಡಿಸುವುದು ಅಗತ್ಯವೆಂದು ಹೋಮ್‌ಲ್ಯಾಂಡ್ ಸೆಕ್ಯುರಿಟಿ ಕಾರ್ಯದರ್ಶಿ ನಿರ್ಧರಿಸಿದ್ದಾರೆ ಎಂದು ಹೇಳಲಾಗಿದೆ.

## ಪುರಾಣ ಪ್ರವಚನದ ಮಹಾಮಂಗಲೋತ್ಸವದಲ್ಲಿ ಮುಕ್ತಿಮಂದಿರ ಶ್ರೀಗಳು

# ನೆಮ್ಮದಿಯ ಬದುಕಿಗೆ ಧರ್ಮವೇ ಆಶಾಕಿರಣ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ


ಧರ್ಮ, ಸಂಸ್ಕಾರ, ಮಾನವೀಯ ಮೌಲ್ಯಗಳ ಬಂಡವಾಳದಿಂದ ಮನುಷ್ಯನಿಗೆ ಶ್ರೇಷ್ಠತೆಯ ಬದುಕು ಪ್ರಾಪ್ತಿಯಾಗುತ್ತದೆ. ಅದಕ್ಕಾಗಿ ಶಾಲಾ ಹಂತದಲ್ಲಿಯೇ ಮಕ್ಕಳಿಗೆ ಪುರಾಣ, ಪುಣ್ಯಕಥೆ, ಸದ್ವಿಚಾರ, ಸತ್ ಚಿಂತನೆ ಮತ್ತು ಸತ್ಸಂಗಗಳ ಅವಶ್ಯಕತೆ ಬಹಳಷ್ಟಿದೆ ಎಂದು ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಹೇಳಿದರು.

ಅವರು ಪಟ್ಟಣದ ತಾಯಿ ಪಾರ್ವತಿ ಮಕ್ಕಳ ಬಳಗದ ಶಿಕ್ಷಣ ಸಂಸ್ಥೆಗಳಿಂದ ಶ್ರಾವಣ ಮಾಸದ ಪ್ರಯುಕ್ತ ಹಮ್ಮಿಕೊಳ್ಳಲಾಗಿದ್ದ ಪುರಾಣ ಪ್ರವಚನದ ಮಹಾಮಂಗಲೋತ್ಸವದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು. ಮನದ ಶಾಂತಿಗೆ, ನೆಮ್ಮದಿಯ ಬದುಕಿಗೆ ಧರ್ಮವೊಂದೇ ಆಶಾಕಿರಣ. ಸಂಸ್ಕಾರ-ಸಂಸ್ಕೃತಿಗಳ ಪುನರುತ್ಥಾನದಿಂದ ಜಗದಲ್ಲಿ ಶಾಂತಿ, ಸಾಮರಸ್ಯ ನೆಲೆಗೊಳ್ಳಲು ಸಾಧ್ಯ. ಈ ನಿಟ್ಟಿನಲ್ಲಿ ಬಳಗದವರು ಪುರಾಣ ಪ್ರವಚನದಿಂದಲೇ ಶೈಕ್ಷಣಿಕ ಕ್ರಾಂತಿ ಮಾಡಿ ಸಮಾಜ ಸುಧಾರಣೆ ಮಾಡುತ್ತಿರುವುದು ಶ್ಲಾಘನೀಯ. ಮಹಾತ್ಮರು, ಪುಣ್ಯ ಪುರುಷರ ನೀಡಿದ ಮಾನವೀಯ ಮೌಲ್ಯಗಳ ಅಮೂಲ್ಯ ಸಂದೇಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಂಡರೆ ಬದುಕು ಸಾರ್ಥಕತೆ ಪಡೆಯುತ್ತದೆ ಎಂದರು.

ಶ್ರಾವಣ ಮಾಸದುದ್ದಕ್ಕೂ ನಡೆದ ಪುರಾಣ ಪ್ರವಚನಕಾರರಾಗಿ ಪ್ರಾಚಾರ್ಯ ಪ್ರಭುಗೌಡ ಯಕ್ಕಿಕೊಪ್ಪ ಅವರು ಶ್ರೀ ಶ್ರೀಶೈಲ ಜಗದ್ಗುರು ವಾಗೀಶ ಪಂಡಿತಾರಾಧ್ಯ ಶಿವಾಚಾರ್ಯ ಲೀಲಾಮೃತ ಚರಿತ್ರೆಯ ಪುರಾಣವನ್ನು ಹೇಳಿದರು. ಕಾರ್ಯಕ್ರಮ ಅಧ್ಯಕ್ಷತೆಯನ್ನು ರಾಜೇಶ್ವರಿ ಪಾಟೀಲವಹಿಸಿದ್ದರು. ಜಯಲಕ್ಷ್ಮೀ ಗಡ್ಡದೇವರಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಂಸ್ಥೆಯ ಅಧ್ಯಕ್ಷೆ ಸುವರ್ಣಾಬಾಯಿ ಬಹದ್ದೂರದೇಸಾಯಿ, ಉಪಾಧ್ಯಕ್ಷೆ ಜಯಲಕ್ಷ್ಮೀ ಮಹಾಂತಶೆಟ್ಟರ, ರೋಹಿಣಿಬಾಯಿ ಬಹದ್ದೂರದೇಸಾಯಿ, ಅಶ್ವಿನಿ ಸಾಲಿಮಠ, ಸರಸ್ವತಿ ಹುಲ್ಲಣ್ಣನವರ, ಜೆ.ಡಿ. ಲಮಾಣಿ, ಸ್ವಾತಿ ಪೈ, ವಿಜಯಕುಮಾರ ಬೆಳೆಯಲಿ ಇದ್ದರು. ಶಾರಕ್ಕ ಮಹಾಂತಶೆಟ್ಟರ ಸ್ವಾಗತಿಸಿದರು. ಎಂ.ಸಿ. ಹಿರೇಮಠ, ಸಚ್ಚಿದಾನಂದ ಮಠದ ನಿರೂಪಿಸಿದರು, ರೂಪಾ ನವಲೆ ವಂದಿಸಿದರು.

ಬಾಗಲಕೋಟೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ವಿ.ವಿ. ಸಾಲಿಮಠ ಸನ್ಮಾನ ಸ್ವೀಕರಿಸಿ ಮಾತನಾಡಿ, ಲಿಂ.ವೀರಗಂಗಾಧರ ಜಗದ್ಗುರುಗಳ ಕೃಪಾಶೀರ್ವಾದಿಂದ ಮಹಿಳೆಯರಿಂದಲೇ ಪ್ರಾರಂಭಗೊಂಡ ತಾಯಿ ಪಾರ್ವತಿ ಮಕ್ಕಳ ಬಳಗದ ಶಾಲೆ ಅವರ ಆಶೀರ್ವಾದದಿಂದಲೇ ಅಮೃತಮಹೋತ್ಸವ ಆಚರಣೆಯಲ್ಲಿರುವುದು ಅತ್ಯಂತ ಹೆಮ್ಮೆಯ ಸಂಗತಿ. ಈ ಸಂಸ್ಥೆ ಇದೇ ರೀತಿ ಶಿಕ್ಷಣದ ಜತೆಗೆ ಮಕ್ಕಳಿಗೆ ಧರ್ಮ ಸಂದೇಶ, ಸನ್ಮಾರ್ಗದ ಶಿಕ್ಷಣ ನೀಡಲಿ. ಮಕ್ಕಳು ಮೊಬೈಲ್, ಟಿವಿಯಿಂದ ಸಮಯ ವ್ಯರ್ಥ ಮಾಡದೇ ವಿದ್ಯಾಭ್ಯಾಸಕ್ಕೆ ಒತ್ತು ಕೊಡಬೇಕು. ವಿದ್ಯೆಗೆ ವಿನಯ, ಸಂಸ್ಕಾರ ಭೂಷಣವಾಗಿದ್ದು ಗುರು-ಹಿರಿಯರೊಂದಿಗೆ ವಿನಮ್ರತೆ, ಗೌರವಯುತವಾಗಿ ನಡೆದುಕೊಳ್ಳಬೇಕು ಎಂದರು.

# ನರೇಗಲ್ಲ ಶ್ರೀ ವೀರಭದ್ರೇಶ್ವರ ಮಹಾರಥೋತ್ಸವ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಶ್ರೀ ವೀರಭದ್ರೇಶ್ವರ ಮಹಾರಥೋತ್ಸವವು ರವಿವಾರ ಸಂಜೆ ನೂರಾರು ಭಕ್ತರ ಸಮ್ಮುಖದಲ್ಲಿ ಸಡಗರ ಸಂಭ್ರಮದಿಂದ ಜರುಗಿತು.

ಸಮಂಗಲೆಯರು ಕುಂಭ-ಕಳಸಗಳಿಗೆ ಪೂಜೆ ಸಲ್ಲಿಸಿದರು. ಮೆರವಣಿಗೆಯಲ್ಲಿ ಪೂಜಾ ಕುಣಿತ, ಶಿವತಾಂಡವ ನೃತ್ಯ, ಭಜನೆ, ನಂದಿಕೋಲ ಸೇವೆಯೊಂದಿಗೆ ಮಹಾ ರಥೋತ್ಸವವು ಸಾಗಿತು. ಶ್ರೀ ವೀರಭದ್ರ ದೇವರ ಪಾದಗಟ್ಟಿಯನ್ನು ತಲುಪಿ, ಮರಳಿ ದೇವಸ್ಥಾನಕ್ಕೆ ಬಂದಿತು. ಸಂಜೆ ಶ್ರೀ ವೀರಭದ್ರೇಶ್ವರ ರಥೋತ್ಸವವು ಎಳೆಯಲು ಸಿದ್ಧವಾಗುತ್ತಿದ್ದಂತೆ ಶಾಸಕ ಜಿ.ಎಸ್. ಪಾಟೀಲ ಆಗಮಿಸಿ, ರಥೋತ್ಸವಕ್ಕೆ ಚಾಲನೆ ನೀಡಿದರು. ತೊಂಡಿಹಾಳ, ಬಂಡಿಹಾಳ, ಕರಮುಡಿ, ಬಿನ್ನಾಳ, ಯಲಬರ್ಗಾ, ಅಬ್ಬಿಗೇರಿ, ಜಕ್ಕಲಿ, ಕೋಟಮಚಗಿ, ನಾರಾಯಣಪೂರ, ಕೋಚಲಾಪೂರ, ತೋಟಗಂಟಿ, ದ್ಯಾಂಪೂರ, ಮಲ್ಲಾಪೂರ, ಕೋಡಿಕೊಪ್ಪ ಸೇರಿದಂತೆ ಸುತ್ತಮುತ್ತಲಿನ ವಿವಿಧ ಗ್ರಾಮಗಳಿಂದ ಆಗಮಿಸಿದ ಸಾವಿರಾರು ಭಕ್ತರು ತೇರನ್ನು ಎಳೆದು ಸಂಭ್ರಮಿಸಿದರು.

# ಶಂಕರಗೌಡ್ರ ಪಾಟೀಲರಿಗೆ ಪ್ರಶಸ್ತಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ತಾಲೂಕಿನ ರಾಮಗಿರಿ ಗ್ರಾಮದವರಾದ, ಸದ್ಯ ಶಹದಾಬಾದ್ ವಿಭಾಗದಲ್ಲಿ ಡಿವೈಎಸ್‌ಪಿಯಾಗಿ ದಕ್ಷ ಮತ್ತು ಪ್ರಾಮಾಣಿಕ ಸೇವೆ ಸಲ್ಲಿಸುತ್ತಿರುವ ಶಂಕರಗೌಡ್ರ ವಿ.ಪಾಟೀಲ ಅವರ ಸೇವೆಯನ್ನು ಪರಿಗಣಿಸಿ ಕೇಂದ್ರ ಗೃಹ ಮಂತ್ರಾಲಯ ಅತ್ಯುತ್ತಮ ತನಿಖಾಧಿಕಾರಿ ಪೊಲೀಸ್ ಸೇವಾ ಪ್ರಶಸ್ತಿ ಪ್ರಕಟಿಸಿದೆ.

ಆಗಸ್ಟ್ 30ರಂದು ಬೆಂಗಳೂರಿನ ಗಾಜಿನ ಮನೆಯಲ್ಲಿ ನಡೆಯುವ ಸಮಾರಂಭದಲ್ಲಿ ರಾಜ್ಯದ ಗೃಹ ಸಚಿವ ಡಾ. ಜಿ.ಪರಮೇಶ್ವರ ಅವರಿಂದ ಪ್ರಶಸ್ತಿ ಸ್ವೀಕರಿಸಲಿದ್ದಾರೆ. ದಕ್ಷ ಅಧಿಕಾರಿ ಶಂಕರಗೌಡ್ರ ಪಾಟೀಲ ಅವರಿಗೆ ಅತ್ಯುತ್ತಮ ತನಿಖಾಧಿಕಾರಿ ಪ್ರಶಸ್ತಿಗೆ ದೊರೆತ ಹಿನ್ನೆಲೆಯಲ್ಲಿ ರಾಮಗಿರಿ ಗ್ರಾಮದಲ್ಲಿ ಸಂಭ್ರಮ ವ್ಯಕ್ತವಾಗಿದ್ದು, ಗಂಜಿಗಟ್ಟಿ ಶ್ರೀಗಳು, ಗ್ರಾಮದ ಗಣ್ಯರು, ಜನಪ್ರತಿನಿಧಿಗಳು, ಮುಖಂಡರು ಅಭಿನಂದನೆ ಸಲ್ಲಿಸಿದ್ದಾರೆ.

# ವಿಧಾನಸಭೆಯಲ್ಲಿ ಆರ್‌ಎಸ್‌ಎಸ್ ಗೀತೆ: ಕ್ಷಮೆ ಕೇಳುತ್ತೇನೆ ಎಂದ ಡಿ.ಕೆ ಶಿವಕುಮಾರ್

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವಿಧಾನಸಭೆಯ ಮಳೆಗಾಲದ ಅಧಿವೇಶನದಲ್ಲಿ ಆರ್‌ಎಸ್‌ಎಸ್ ಗೀತೆ ಹಾಡಿದ್ದಕ್ಕೆ 'ಕ್ಷಮೆ ಕೇಳಲು ಸಿದ್ಧ'ಎಂದು ಕೆಪಿಸಿಸಿ ಅಧ್ಯಕ್ಷ ಹಾಗೂ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಮಂಗಳವಾರ (ಆ.26) ಹೇಳಿದ್ದಾರೆ. ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, "ನಿಮಗೆ ಕ್ಷಮೆ ಬೇಕಾ?..ಓಕೆ ಎಲ್ಲಾ ಕಾಂಗ್ರೆಸಿಗರಿಗೆ, ಇಂಡಿಯಾ ಒಕ್ಕೂಟದ ವಿವಿಧ ಪಕ್ಷಗಳ ಗೆಳೆಯರಿಗೆ ಬೇಜಾರಾಗಿದ್ರೆ, ನಾನು ತಪ್ಪು ಮಾಡಿದ್ದೇನೆ ಎಂದನಿಸಿದ್ದರೆ 'ನಾನು ಕ್ಷಮೆ ಕೇಳಲು ಮತ್ತು ಅವರ ಸಲಹೆಗಳನ್ನು ಸ್ವೀಕರಿಸಲು ಸಿದ್ಧ" ಎಂದಿದ್ದಾರೆ.

## ಉಡಚಮ್ಮದೇವಿ ಜ್ಞಾನವಿಕಾಸ ಕೇಂದ್ರದ ವಾರ್ಷಿಕೋತ್ಸವ, ಉಪನ್ಯಾಸ

# ಮಹಿಳೆಯರಲ್ಲಿ ಅಸಾಮಾನ್ಯ ಶಕ್ತಿಯಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಮಾನವನ ಪ್ರಗತಿ ಹಾಗೂ ಅಮೋಘ ಸಾಧನೆಗಳ ಹಿಂದೆ ಬದುಕಿನ ಸತ್ಯ ಪರೀಕ್ಷೆಗಳನ್ನು ಗಟ್ಟಿಯಾಗಿ ನಿಂತು ಎದುರಿಸಿ ಮುಂದೆ ಸಾಗುವುದರಲ್ಲಿ ನಮ್ಮ ಮಹಿಳೆಯರ ಸುವ್ಯಕ್ತ ಪಾತ್ರವಿದೆ ಎಂಬುದಕ್ಕೆ ಇತಿಹಾಸದ ಪುಟಗಳು ಪ್ರಮುಖ ಸಾಕ್ಷಿಗಳಾಗಿವೆ ಎಂದು ಜಿಲ್ಲಾ ಲೇಖಕಿಯರ ಸಂಘದ ಅಧ್ಯಕ್ಷೆ ಕವಿತಾ ದಂಡಿನ ಹೇಳಿದರು.

ಅವರು ಗದುಗಿನ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಗದಗ ಜಿಲ್ಲಾ, ಗದಗ ತಾಲೂಕಿನ, ಗದಗ ಶಹರ ವಲಯದ ತ್ರಿಕೂಟೇಶ್ವರ ಕಾರ್ಯ ಕ್ಷೇತ್ರದಲ್ಲಿ ಉಡಚಮ್ಮ ದೇವಿ ಜ್ಞಾನವಿಕಾಸ ಕೇಂದ್ರದ ವಾರ್ಷಿಕೋತ್ಸವದಲ್ಲಿ 'ಸಾಧಕ ಮಹಿಳೆಯರು' ವಿಷಯವಾಗಿ ಉಪನ್ಯಾಸ ನೀಡಿ ಮಾತನಾಡಿದರು.




ಮಹಿಳೆಯರಲ್ಲಿ ಅಸಾಮಾನ್ಯ ಶಕ್ತಿ ಇದೆ. ಮುಖ್ಯವಾಗಿ ಸಾಧಿಸುವ ಮನಸ್ಸು ಇರಬೇಕು. ಆರ್ಥಿಕ ಹಾಗೂ ಶೈಕ್ಷಣಿಕವಾಗಿ ಮಹಿಳೆಯರು ಸಬಲರಾದಾಗ ಮಾತ್ರ ಶೋಷಣೆಗಳಿಂದ ಮುಕ್ತಿ ಹೊಂದಬಹುದು. ಆತ್ಮವಿಶ್ವಾಸದಿಂದ ಮುನ್ನಡೆಯಬೇಕು. ಸ್ತ್ರೀಶಕ್ತಿ ಗುಂಪುಗಳು ಸ್ತ್ರೀಯರಲ್ಲಿ ಆರ್ಥಿಕ ಸಧೃಡತೆಯೊಂದಿಗೆ ಅವರನ್ನು ಸ್ವಾವಲಂಬಿಗಳನ್ನಾಗಿ ಮಾಡುತ್ತಿವೆ ಎಂದರು.

ಗದಗ ತಾಲೂಕಿನ ಸಂಘದ ಯೋಜನಾಧಿಕಾರಿ ಉಮಾ ಜೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಮಹಿಳೆಯರೆಲ್ಲರೂ ಒಂದಲ್ಲ ಒಂದು ರೀತಿಯಿಂದ ಸಾಧಕ ಮಹಿಳೆಯರೇ. ಮನೆಯನ್ನು ಸದೃಢವಾಗಿ ನಿಭಾಯಿಸಿ ಮಕ್ಕಳನ್ನು ಶಿಕ್ಷಣವಂತರನ್ನಾಗಿ ಮಾಡಿ ಬದುಕಿನಲ್ಲಿ ಸಾಧನೆಯನ್ನು ಮೆರೆದ ಮಹಿಳಾ ಮಣಿಗಳು ಇಂದು ನಮ್ಮೆದುರು ಇದ್ದಾರೆ. ಸಾಧಕರಿಗೆ ಶ್ರಮವಿಲ್ಲ. ಕುಟುಂಬವನ್ನು ಪ್ರೀತಿಯಿಂದ ಅಚ್ಚುಕಟ್ಟಾಗಿ ಮುನ್ನಡೆಸುವ ಮಹಿಳೆಯರು ಅದರೊಂದಿಗೆ ಎಲ್ಲ ಕ್ಷೇತ್ರಗಳಲ್ಲಿಯೂ ಸಮರ್ಥವಾಗಿ ಆಡಳಿತವನ್ನು ನಿಭಾಯಿಸಿದ್ದಾರೆ ಎಂದರು.

ಅತಿಥಿಗಳಾಗಿ ಆಗಮಿಸಿದ್ದ ಗದಗ-ಬೆಟಗೇರಿ ನಗರಸಭೆಯ ಸದಸ್ಯೆ ಶೈಲಾ ಬಾಕಳೆ ಮಾತನಾಡಿ, ಸ್ತ್ರೀ ಶಕ್ತಿ ಗುಂಪುಗಳು ಮಹಿಳೆಯರನ್ನು ಒಟ್ಟುಗೂಡಿಸಿ ಅವರಲ್ಲಿಯ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತವೆ. ಆರ್ಥಿಕವಾಗಿ ಸದೃಢತೆ ಹೊಂದಲು ಹಣದ ಉಳಿತಾಯ ಅವಶ್ಯಕ. ಗುಂಪುಗಳಿಂದ ಒಗ್ಗಟ್ಟು, ಪರಸ್ಪರ ಪರಿಚಯ ಬೆಳೆದು ಬರುತ್ತದೆ ಎಂದರು.

ಪ್ರಾಸ್ತಾವಿಕವಾಗಿ ಜ್ಞಾನವಿಕಾಸ ಕೇಂದ್ರದ ಸಮನ್ವಯಾಧಿಕಾರಿ ಗಂಗಮ್ಮ ಮರಾಠೆ ಮಾತನಾಡಿ, ಧರ್ಮಸ್ಥಳ ಕ್ಷೇತ್ರದ ಸ್ತ್ರೀ ಶಕ್ತಿ ಗುಂಪುಗಳ ಯೋಜನೆಗಳು ಬಹಳ ಉಪಯೋಗಕಾರಿಯಾಗಿವೆ. ತಗೆದುಕೊಳ್ಳುವ ಹಾಗೂ ಕೊಡುವ ಹಣಕಾಸಿನ ವ್ಯವಹಾರವನ್ನು ಎಲ್ಲ ಸದಸ್ಯರು ನಿಷ್ಠೆಯಿಂದ ಮಾಡಬೇಕು. ಆರ್ಥಿಕವಾಗಿ ನಮಗೆಲ್ಲ ಇದು ಸಹಾಯಕಾರಿಯಾಗಿದೆ ಎಂದರು.

ಸ್ತ್ರೀಶಕ್ತಿ ಕೇಂದ್ರದ ಸದಸ್ಯರಿಂದ ಸಾಮೂಹಿಕ ನೃತ್ಯ, ಗಾಯನ, ಆಟೋಟ ಮುಂತಾದ ಕಾರ್ಯಕ್ರಮಗಳು ಜರುಗಿದವು. ವಿಜೇತರಿಗೆ ಬಹುಮಾನ ವಿತರಿಸಲಾಯಿತು. ಶ್ರೀ ವಿರಭದ್ರೇಶ್ವರ ಸ್ತ್ರೀಶಕ್ತಿ ಗುಂಪಿನ ಸದಸ್ಯರಾದ ಸುವರ್ಣ ಮೃತ್ಯುಂಜಯಮಠ ಹಾಗೂ ಶೋಭಾ ಬಾಂಢಗೆ ಪ್ರಾರ್ಥಿಸಿದರು. ವಿದ್ಯಾ ಮಳಗಿ ಸ್ವಾಗತ ಗೀತೆ ಹೇಳಿದರು. ಶಿಲ್ಪಾ ಬದಿ ಸ್ವಾಗತಿಸಿದರು. ಅನಿತಾ ಮೃತ್ಯುಂಜಯಮಠ ನಿರೂಪಿಸಿದರು. ಕೊನೆಯಲ್ಲಿ ಸಂಗೀತಾ ವಂದಿಸಿದರು.

ಕಾರ್ಯಕ್ರಮದಲ್ಲಿ ಪಾಂಡುರಂಗ ಸ್ತ್ರೀಶಕ್ತಿ ಸಂಘ, ಲಕ್ಷ್ಮೀ ಸ್ತ್ರೀಶಕ್ತಿ ಸಂಘ, ಕಾಳಿಕಾ ದೇವಿ ಸ್ತ್ರೀಶಕ್ತಿ ಸಂಘದ ಹನುಮಂತಿ ಕೊಳ್ಳಿ, ಅನುರಾಧಾ ಲದ್ವಾ, ಅನಿತಾ ಕಾಟೇಕರ, ಅಮೃತಾ ಲದ್ವಾ, ಮಾಲಾ ಡಾನಿ, ನನ್ನಿಮಾ ನಾಗನೂರ, ವಿಜಯಲಕ್ಷ್ಮೀ ಮಡಿವಾಳರ ಮುಂತಾದವರು ಉಪಸ್ಥಿತರಿದ್ದರು.

ಅಧ್ಯಕ್ಷತೆಯನ್ನು ಕೇಂದ್ರದ ಅಧ್ಯಕ್ಷೆ ಸರೋಜಾ ಶೇಜವಾಡಕರ ವಹಿಸಿ ಮಾತನಾಡಿ, ಮಹಿಳಾ ಶಕ್ತಿ ಗುಂಪುಗಳು ಶಕ್ತಿಯ ಸಂಕೇತ. ಒಗ್ಗಟ್ಟು, ಪರಸ್ಪರ ಸಹಕಾರ ಇಲ್ಲಿ ಕಂಡು ಬರುತ್ತದೆ. ಮಾತನಾಡುವ ಕಲೆ ಹಾಗೂ ಪ್ರತಿಭೆಗೂ ಇಲ್ಲಿ ಅವಕಾಶ ಉಂಟಾಗುತ್ತದೆ. ಹೀಗಾಗಿ ಸ್ತ್ರೀ ಶಕ್ತಿ ಗುಂಪುಗಳು ಮಹಿಳೆಯರಲ್ಲಿ ಸದೃಢವಾದ ಬೆಳವಣಿಗೆಯನ್ನು ಮೂಡಿಸುತ್ತವೆ ಎಂದರು.

## ಶಿವಯೋಗಿಗಳು ನಡೆದಾಡಿದ ಪಾವನ ತಾಣವಿದು



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಕ್ಕಳಲ್ಲಿ ಅಗಾಧವಾದ ಶಕ್ತಿಯಿದೆ. ಅದನ್ನು ಹೊರಹಾಕಲು ಪೂರಕ ವಾತಾವರಣ ಕಲ್ಪಿಸಬೇಕು ಎಂದು ಧಾರವಾಡದ ವೈದ್ಯಾಧಿಕಾರಿ ಡಾ. ರಾಜಶೇಖರ ಬಸೆಟ್ಟಿ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಬಾಲಲೀಲಾ ಮಹಾಂತ ಶಿವಯೋಗಿ ಗವಿಮಠದಲ್ಲಿ ಶ್ರಾವಣ ಮಾಸದ ಪ್ರಯುಕ್ತ ನಡೆದ ಪ್ರವಚನ ಕಾರ್ಯಕ್ರಮದ ಮಂಗಲೋತ್ಸವ, ಬಾಲಲೀಲಾ ಮಹಾಂತ ಶಿವಯೋಗಿಗಳ 201ನೇ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ, ಒಳ್ಳೆಯ ವಿಚಾರಗಳನ್ನು ಅನುಕರಣೆ ಮಾಡಬೇಕು. ಜಾನಪದ ಕಲೆ ನಮ್ಮ ಸಂಸ್ಕೃತಿಯನ್ನು ತಿಳಿಸುತ್ತದೆ. ಉತ್ತಮ ಆಚಾರ-ವಿಚಾರಗಳನ್ನು ಅನುಷ್ಠಾನಗೊಳಿಸಬೇಕು. ಶಿವಯೋಗಿಗಳು ನಡೆದಾಡಿದ ಪಾವನ ತಾಣವಿದು. ಇಲ್ಲಿ ಅದ್ಭುತ ಶಕ್ತಿಯಿದೆ ಎಂದರು.

ಯರನಾಳದ ವಿರಕ್ತಮಠದ ಸಂಗನಬಸವ ಸ್ವಾಮೀಜಿ ಮಾತನಾಡಿ, ಬಸವಣ್ಣನವರು 12ನೇ ಶತಮಾನದಲ್ಲಿ ಜಾತಿಯ ಕ್ರಾಂತಿ ಎಬ್ಬಿಸಿದ ನಾಡಿದು. ಇಲ್ಲಿ ಮಠಾಧೀಶರು ಮಠಕ್ಕೆ ಸೀಮಿತವಾಗಿರದೇ ಸಮಾಜಕ್ಕೆ ಸೀಮಿತವಾಗಿದ್ದು, ಜನರಿಗೆ ಮಾದರಿಯಾಗಿರಬೇಕು. ಶಿವಜ್ಞಾನವನ್ನು ಮಾಡುವದರಿಂದ ಜನ್ಮ ಜನ್ಮದ ಪಾಪಗಳು ಪರಿಹಾರವಾಗುತ್ತವೆ. ಹೆಚ್ಚಾಗಿ ಈ ಶ್ರಾವಣ ಮಾಸದಲ್ಲಿ ಪುರಾಣ ಪ್ರವಚನಗಳು ನಡೆಯುತ್ತವೆ. ಅದನ್ನು ಕೇಳಿ ಅದರಂತೆ ನಡೆಯಬೇಕು ಎಂದರು.

ಧಾರವಾಡ ಮುರುಘಾಮಠ ಹಾಗೂ ಮುಳಗುಂದ ಗವಿಮಠದ ಮಲ್ಲಿಕಾರ್ಜುನ ಸ್ವಾಮೀಜಿ ಆಶೀರ್ವಚನ ನೀಡಿದರು. ಈ ಸಂದರ್ಭದಲ್ಲಿ ಪ್ರವಚನಕಾರ ಪಂಚಾಕ್ಷರಯ್ಯ ಮರಿದೇವರಮಠ, ಎಂ.ಡಿ. ಬಟ್ಟೂರ, ಡಾ. ಎಸ್.ಸಿ. ಚವಡಿ, ಗೌರಮ್ಮ ಬಡ್ನಿ, ಶಿವಾಜಿ ಬಳಗಾನೂರ, ಪರಮೇಶ್ವರಪ್ಪ ಈ.ಕಣವಿ ಮುಂತಾದವರು ಇದ್ದರು.

ಧಾರವಾಡ ತಾಲೂಕಿನ ಬೆಳೆ ಹಾನಿ ಪ್ರದೇಶಗಳಿಗೆ ಜಿಲ್ಲಾಧಿಕಾರಿ ದಿವ್ಯ ಪ್ರಭು ಭೇಟಿ

# ಎಲ್ಲೆಡೆ ಹಸಿರು ಬರದ ದರ್ಶನ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲೆಯಲ್ಲಿ ಆರಂಭದಲ್ಲಿ ಮುಂಗಾರು ಬೆಳೆಗಳು ಉತ್ತಮ ಫಸಲು ನೀಡುವ ನಿರೀಕ್ಷೆಯಲ್ಲಿದ್ದರೂ, ನಂತರದ ದಿನಗಳಲ್ಲಿ ಆರಂಭವಾದ ನಿರಂತರ ಮಳೆ, ಹವಾಮಾನ ವೈಪರಿತ್ಯದಿಂದಾಗಿ ಕೀಟ, ರೋಗ-ರುಜಿನಗಳಿಂದ ಬೆಳೆಗಳು ಕುಂಠಿತವಾದವು. ಇದರಿಂದ ನಿರೀಕ್ಷಿತ ಫಸಲು ಹುಸಿ ಎನಿಸಿತು. ಕೆಲವು ರೈತರು ಮರುಬಿತ್ತನೆ ಮಾಡಿದ್ದರಿಂದ ಜಮೀನುಗಳಲ್ಲಿ ಹಸಿರು ಕಾಣಿಸುತ್ತಿದೆ. ಆದರೆ ಅವುಗಳಲ್ಲಿ ಫಸಲು ಕಾಣುತ್ತಿಲ್ಲ. ಈ ಹಿನ್ನೆಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಸೂಚನೆಯಂತೆ ಇಡೀ ಜಿಲ್ಲೆಯಲ್ಲಿ ಬೆಳೆ ಹಾನಿ ಸಮೀಕ್ಷೆಯನ್ನು ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಧಾರವಾಡ ತಾಲೂಕಿನ ಮಾರಡಗಿ, ಶಿವಳ್ಳಿ, ಹೆಬ್ಬಳ್ಳಿ, ಅಮ್ಮಿನಭಾವಿ, ಮರೇವಾಡ ಸೇರಿದಂತೆ ವಿವಿಧ ಗ್ರಾಮಗಳ ರೈತರ ಜಮೀನುಗಳಿಗೆ ಸೋಮವಾರ ಭೇಟಿ ನೀಡಿ, ಮಳೆ ಹಾನಿ ಮತ್ತು ಬೆಳೆ ಹಾನಿ ಪ್ರದೇಶಗಳನ್ನು ಪರಿಶೀಲಿಸಿ



ರೈತರ ಎಲ್ಲ ಸಮಸ್ಯೆಗಳನ್ನು ನಾವು ಅರ್ಥ ಮಾಡಿಕೊಂಡಿದ್ದೇವೆ. ಸರ್ಕಾರದಿಂದ ಸಾಧ್ಯವಾದ ಎಲ್ಲಾ ನೆರವು ದೊರಕುವಂತೆ ಕ್ರಮ ಕೈಗೊಳ್ಳಲಾಗುತ್ತದೆ. ಬೆಳೆ ವಿಮಾ ಯೋಜನೆಯಡಿಯಲ್ಲಿ ರೈತರು ಕಡ್ಡಾಯವಾಗಿ ಅರ್ಜಿ ಸಲ್ಲಿಸಬೇಕು. ಈಗಾಗಲೇ ಹಾನಿ ಅಂದಾಜು ಪ್ರಕ್ರಿಯೆ ಆರಂಭವಾಗಿದೆ. ಶೀಘ್ರದಲ್ಲೇ ಪರಿಹಾರ ವಿತರಣೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಭರವಸೆ ನೀಡಿದರು.

ಅವರು ಮಾತನಾಡಿದರು.

ಈಗಾಗಲೇ ಕೃಷಿ, ತೋಟಗಾರಿಕೆ ಮತ್ತು ಕಂದಾಯ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳ ತಂಡಗಳು, ಗ್ರಾಮವಾರು ಬೆಳೆ ಹಾನಿ ಕುರಿತು ಜಂಟಿ ಸಮೀಕ್ಷೆಯನ್ನು ಕೈಗೊಳ್ಳಲು ಸೂಚಿಸಲಾಗಿದೆ. ಮುಂದಿನ ಒಂದು ವಾರದಲ್ಲಿ ಬೆಳೆ ಹಾನಿ ಸಮೀಕ್ಷೆಯನ್ನು ಪೂರ್ಣಗೊಳಿಸಿ, ದತ್ತಾಂಶಗಳನ್ನು ದಾಖಲಿಸಲು ನಿರ್ದೇಶನ ನೀಡಲಾಗಿದೆ ಎಂದರು.

ಸರ್ಕಾರದ ಸೂಚನೆ ಇದ್ದರೂ ಕೆಲವು ಬ್ಯಾಂಕ್ ಶಾಖೆಗಳ ವ್ಯವಸ್ಥಾಪಕರು ರೈತ-ರಿಂದ ಒತ್ತಾಯಪೂರ್ವಕವಾಗಿ ಸಾಲ ವಸೂಲಾತಿಗೆ ನೋಟಿಸ್ ನೀಡಿ, ಕಿರಿಕಿರಿ ಮಾಡುತ್ತಿದ್ದಾರೆ ಎಂದು ರೈತರು ದೂರು ಸಲ್ಲಿಸುತ್ತಿದ್ದಾರೆ. ಸರ್ಕಾರ ಮತ್ತು ಜಿಲ್ಲಾಡಳಿತವು ರೈತರಿಗೆ ಸಾಲ ವಾಸೂಲಾತಿಯಿಂದ ತೊಂದ-ರೆಯಾಗದಂತೆ ನೋಡಿಕೊಳ್ಳಲು ಮತ್ತು ಸರ್ಕಾರ ನೀಡುವ ಬೆಳೆ ಪರಿಹಾರ, ವಿಮೆ ಪರಿಹಾರದ ಸಹಾಯಧನವನ್ನು ಆಯಾ ರೈತರ ಒಪ್ಪಿಗೆ ಇಲ್ಲದೇ ಸಾಲಕ್ಕೆ ಜಮೆ ಮಾಡುವುದು ಅಥವಾ ಸಾಲದ ಖಾತೆಗಳಿಗೆ ವರ್ಗಾಯಿಸುವುದು ಅಪರಾಧ. ಆದರೆ ಈ ಕುರಿತ ಎಚ್ಚರಿಕೆಯ ಮಧ್ಯೆಯೂ ಕೆಲವು ಬ್ಯಾಂಕ್‌ಗಳ ವ್ಯವಸ್ಥಾಪಕರು ಸಾಲ ವಸೂಲಾತಿಗೆ ನೋಟಿಸ್ ನೀಡಿ, ಬೆಳೆ ನಷ್ಟದ ಸಂದರ್ಭದಲ್ಲಿ ತೊಂದರೆ ಕೊಡುತ್ತಿದ್ದಾರೆ ಎಂದು ದೂರಿದ್ದಾರೆ. ಈ ಕುರಿತು ಎಚ್ಚರಿಕೆ ವಹಿಸಲು ಮತ್ತು ರೈತರಿಗೆ ತೊಂದರೆ ಆಗದಂತೆ ಕ್ರಮವಹಿಸಲು ಎಲ್ಲ ಬ್ಯಾಂಕ್‌ಗಳ ಮುಖ್ಯಸ್ಥರಿಗೆ ನಿರ್ದೇಶನ ನೀಡಲಾಗಿದೆ ಎಂದರು.

ಮಾರಡಗಿ ಗ್ರಾಮದ ರೈತರಾದ ಜಿ.ಎಸ್. ಪಾಟೀಲಕುಲಕರ್ಣಿ, ಪಕೀರಪ್ಪ ವನಹಳ್ಳಿ, ಹನುಮಂತ ಮಾರಡಗಿ, ಮುತ್ತುಂ ದರಗದ, ಸೋಮಣ್ಣ ಹುಬ್ಬಳ್ಳಿ, ಮುತ್ತುಂ ಸಾಬ್ ಹಾಗೂ ಹೆಬ್ಬಳ್ಳಿ ಗ್ರಾಮದ ರೈತರಾದ ಸಿ.ಬಿ. ಮಟ್ಟಿ, ಗಿರಿ ಮಲ್ಲಯ್ಯ ಉಮಚಗಿಮಠ, ಬಸವರಾಜ ತಂಬಾಕದ, ಬಸವರಾಜ ನಾಯ್ಕರ, ಬಾಳು ಕುಡೇಕಾರ, ವಿಠ್ಠಲ ಬೋವಿ, ಸುರೇಶ ಬನ್ನಿಗಿಡದ, ನಿಂಗಪ್ಪ ಶಿವಳ್ಳಿ, ಮಲ್ಲಪ್ಪ ನವಲೂರು ಮುಂತಾದವರು ಉಪಸ್ಥಿತರಿದ್ದರು.

ಜಿಲ್ಲಾಧಿಕಾರಿಗಳ ಬೆಳೆ ಹಾನಿ ಪ್ರದೇಶಗಳ ಭೇಟಿ ಸಂದರ್ಭದಲ್ಲಿ ಕೃಷಿ ಇಲಾಖೆಯ ಉಪನಿರ್ದೇಶಕಿ ಜಯಶ್ರೀ ಹಿರೇಮಠ, ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಇಮ್ತಿಯಾಜ್ ಚಂಗಾಪೂರಿ, ತಹಸೀಲ್ದಾರ ಡಾ. ಎಚ್.ಹೂಗಾರ, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ರಾಜಶೇಖರ ಅನಗೌಡರ, ಕೃಷಿ ಅಧಿಕಾರಿ ರೇಖಾ ಬೆಳ್ಳಟ್ಟಿ, ಮೋಹನ ಲಕ್ಕಮ್ಮನವರ, ಎಚ್.ಎಮ್. ಬಾದಾಮಿ, ತೋಟಗಾರಿಕೆ ಇಲಾಖೆಯ ಯೋಗೇಂದ್ರ, ಅಮ್ಮಿನಭಾವಿ ಕಂದಾಯ ನಿರೀಕ್ಷಕ ಸಂಪತ್‌ಕುಮಾರ ಒಡೆಯರ್ ಸೇರಿದಂತೆ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು, ರೈತ ಮುಖಂಡರು, ಗ್ರಾಮಸ್ಥರು ಉಪಸ್ಥಿತರಿದ್ದರು.

## ಇಂದು ರೋಣದಲ್ಲಿ ವಿಶೇಷ ತರಬೇತಿ ಶಿಬಿರ

■ ವಿಜಯಸಾಕ್ಷಿ ಸುದ್ದಿ, ಗದಗ

ಸಹಕಾರ ಇಲಾಖೆ ಗದಗ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ., ಗದಗ ಹಾಗೂ ಕೆ.ಸಿ.ಸಿ.ಬ್ಯಾಂಕ್ ಲಿ., ಧಾರವಾಡ ಇವರ ಸಂಯುಕ್ತ ಆಶ್ರಯದಲ್ಲಿ ರೋಣ ಹಾಗೂ ಗಜೇಂದ್ರಗಡ ತಾಲೂಕುಗಳ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಒಬ್ಬ ನಿರ್ದೇಶಕರುಗಳಿಗೆ ವಿಶೇಷ ತರಬೇತಿ ಶಿಬಿರ ದಿ. 28.08.2025 ಗುರುವಾರ ಬೆಳಿಗ್ಗೆ 10 ಗಂಟೆಗೆ ರೋಣ ಪಟ್ಟಣದಲ್ಲಿ ಇರುವ ದಿ ಕೆ.ಸಿ.ಸಿ ಬ್ಯಾಂಕ್‌ನ ಸಭಾಭವನ ಜರುಗಲಿದೆ.

ಅಧ್ಯಕ್ಷತೆಯನ್ನು ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ಅಧ್ಯಕ್ಷರಾದ ಸಿ.ಎಂ.ಪಾಟೀಲ ವಹಿಸುವರು. ಉದ್ಘಾಟನೆಯನ್ನು ಕರ್ನಾಟಕ ರಾಜ್ಯ ಸಹಕಾರ ಗ್ರಾಹಕರ ಮಹಾಮಂಡಳ ನಿ., ಬೆಂಗಳೂರು ಇದರ ಅಧ್ಯಕ್ಷರು ಹಾಗೂ ಕೆ.ಸಿ.ಸಿ ಬ್ಯಾಂಕ್ ಲಿ., ಧಾರವಾಡ ಇದರ ನಿರ್ದೇಶಕರಾದ ಜಿ. ಪಿ. ಪಾಟೀಲ ನೆರವೇರಿಸಲಿದ್ದಾರೆ.


ಕೆ.ಸಿ.ಸಿ ಬ್ಯಾಂಕ್ ನಿರ್ದೇಶಕರಾದ ಸಿ. ಬಿ. ದೊಡ್ಡಗೌಡ್ರ, ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ನಿರ್ದೇಶಕರಾದ ಸುರೇಶಗೌಡ ಎಂ. ಪಾಟೀಲ, ಗದಗ ಜಿಲ್ಲೆಯ ಸಹಕಾರ ಸಂಘಗಳ ಉಪನಿಬಂಧಕಿಯರಾದ ಶ್ರೀಮತಿ ಎಸ್. ಎಸ್. ಕಬಾಡೆ, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ ಗದಗ ಉಪನಿರ್ದೇಶಕರಾದ ಅರವಿಂದ ಎನ್. ನಾಗಜ್ಜನವರ, ಸಹಕಾರ ಸಂಘಗಳ ಸಹಾಯಕ ನಿಬಂಧಕಿಯರಾದ ಶ್ರೀಮತಿ ಪುಷ್ಪಾ ಕೆ. ಕಡಿವಾಳ, ರೋಣ ತಾಲೂಕಿನ ಸಹಕಾರ ಅಭಿವೃದ್ಧಿ ಅಧಿಕಾರಿಗಳಾದ ಪ್ರಶಾಂತ ಮುಧೋಳ, ಗದಗ ಕೆ.ಸಿ.ಸಿ. ಬ್ಯಾಂಕಿನ ಜಿಲ್ಲಾ ನಿಯಂತ್ರಣಾಧಿಕಾರಿಗಳಾದ ಸುನೀಲ ಚಳಗೇರಿ, ಕೆ.ಸಿ.ಸಿ. ಬ್ಯಾಂಕ್ ಲಿ., ರೋಣ ಇದರ ಹಿರಿಯ ಹಾಗೂ ಕಿರಿಯ ಬ್ಯಾಂಕ್ ನಿರೀಕ್ಷಕರುಗಳಾದ ಎ. ಎ. ಶಾಬಾದಿ, ಜಿ. ಪಿ. ರಾಠೋಡ್, ಎಂ.ಬಿ.ಪೂಜಾರಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಚಂದ್ರಶೇಖರ ಎಸ್. ಕರಿಯಪ್ಪನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತರಬೇತಿ ಕಾರ್ಯಾಗಾರದಲ್ಲಿ "ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ಆಡಳಿತ ನಿರ್ವಹಣೆ" ಕುರಿತು, ಸಚಿನ್ ಎಸ್. ಮುರಗುಂಡಿ ಮಾಜಿ ಅಧ್ಯಕ್ಷರು ಹಾಗೂ ಹಾಲಿ ನಿರ್ದೇಶಕರು, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ., ಹನಗಂಡಿ, "ಸಭೆಗಳು ಹಾಗೂ ಸಭೆಗಳಲ್ಲಿನ ಪ್ರಕಾರಗಳ" ಕುರಿತು. ಹಾಗೂ "ಸಾಲ ತರುವುದು, ವಿತರಿಸುವುದು, ವಸೂಲಿ ಹಾಗೂ ಸಂಬಂಧಿಸಿದ ಬ್ಯಾಂಕಿಗೆ ಮರುಪಾವತಿಸುವ" ಕುರಿತು, ರೋಣ ತಾಲೂಕಿನ ಸಹಕಾರಿ ಅಭಿವೃದ್ಧಿ ಅಧಿಕಾರಿಗಳಾದ ಪ್ರಶಾಂತ ಮುಧೋಳ ಉಪನ್ಯಾಸ ನೀಡುವರು.

## ಮಂಗಗಳ ಉಪಟಳ ನಿಯಂತ್ರಣಕ್ಕೆ ಮನವಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶೇಂಗಾ, ಗೋವಿನಜೋಳ ಬೆಳೆಗೆ ಮಂಗಗಳ ಹಾವಳಿ ಹೆಚ್ಚಾಗಿದೆ. ಜಿಲ್ಲೆಯ ಶಿರಹಟ್ಟಿ ತಾಲೂಕಿನ ಅರಣ್ಯ ವಲಯ ವ್ಯಾಪ್ತಿಯ ಶೆಟ್ಟಿಕೆರೆ, ಛಬ್ಬಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ಬೆಳೆದ ನಿಂತ ಬೆಳೆಗಳು ಅತಿವೃಷ್ಟಿಯಿಂದ ಹಾನಿಗೀಡಾಗಿದೆ. ಇನ್ನೊಂದೆಡೆ ಮಂಗಗಳ ಉಪಟಳದಿಂದಾಗಿ ಅಳಿದುಳಿದ ಬೆಳೆಗಳೂ ಸಹ ನಾಶವಾಗುತ್ತಿವೆ. ದೊಡ್ಡ ದೊಡ್ಡ ಹಿಂಡುಗಳೊಂದಿಗೆ ಆಗಮಿಸುವ ಮಂಗಗಳು ಶೇಂಗಾ ಬೆಳೆಯನ್ನು ಕಿತ್ತು ತಿಂದು ಹಾಳು ಮಾಡುತ್ತಿವೆ.



ಇದರಿಂದ ಬೇಸತ್ತಿರುವ ರೈತ ಸಮುದಾಯ ಮಂಗಗಳ ಹಾವಳಿಯನ್ನು ನಿಯಂತ್ರಿಸುವಂತೆ ಬಟ್ಟೂರ ಗ್ರಾಮ ಪಂಚಾಯಿತಿ, ಅರಣ್ಯ ಇಲಾಖೆ ಹಾಗೂ ಕಂದಾಯ ಇಲಾಖೆಗಳಿಗೆ ಮನವಿ ಮಾಡಿದ್ದಾರೆ. ಆದರೆ ಯಾರೂ ಸಹ ಸರಿಯಾಗಿ ಸ್ಪಂದಿಸುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ.

ಅಲೆಮಾರಿ/ ಅರೆ ಅಲೆಮಾರಿ ಜನಾಂಗದವರಿಗೆ ಸರ್ಕಾರದಿಂದ ವಿವಿಧ ಸೌಲಭ್ಯಗಳು

# ಅರ್ಹ ಫಲಾನುಭವಿಗಳು ಅರ್ಜಿ ಸಲ್ಲಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಅಲೆಮಾರಿ/ಅರೆ ಅಲೆಮಾರಿ ಜನಾಂಗದವರಿಗೆ ಸರ್ಕಾರದಿಂದ ಈ ಕೆಳಕಂಡ ಸೌಲಭ್ಯಗಳಿದ್ದು, ಅರ್ಹ ಫಲಾನುಭವಿಗಳು ಸೌಲಭ್ಯಗಳನ್ನು ಪಡೆಯಬಹುದಾಗಿದೆ.

**ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹಧನ:** ಅಲೆಮಾರಿ/ ಅರೆ ಅಲೆಮಾರಿ ಜನಾಂಗಕ್ಕೆ ಸೇರಿದ ವಿದ್ಯಾರ್ಥಿಗಳ ಮಾಧ್ಯಮಿಕ ಹಾಗೂ ಪ್ರೌಢಶಿಕ್ಷಣಕ್ಕೆ ಆರ್ಥಿಕ ನೆರವು ನೀಡುವುದರ ಮೂಲಕ ಮಧ್ಯದಲ್ಲಿ ಶಾಲೆ ಬಿಡುವವರ ಪ್ರಮಾಣ ಕಡಿಮೆ ಮಾಡಲು ಹಾಗೂ ಶಿಕ್ಷಣ ಹಂತ ಮುಂದುವರೆಸುವ ಉದ್ದೇಶದಿಂದ ಈ ಕಾರ್ಯಕ್ರಮ ಜಾರಿಗೊಳಿಸಲಾಗಿದೆ.

**ಮೆಟ್ರಿಕ್ ಪೂರ್ವ ಶಿಷ್ಯವೇತನ:** 1ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ 200 ರೂ.ಗಳಂತೆ 10 ತಿಂಗಳು ನೀಡಲಾಗುತ್ತದೆ. ಅಲೆಮಾರಿ/ ಅರೆ ಅಲೆಮಾರಿ ಜನಾಂಗಕ್ಕೆ ಸೇರಿರಬೇಕು. ಕುಟುಂಬದ ಒಟ್ಟು ವಾರ್ಷಿಕ ಆದಾಯ ರೂ.2 ಲಕ್ಷ, ಹಿಂದಿನ ವರ್ಷದಲ್ಲಿ ಎಲ್ಲ ವಿಷಯಗಳಲ್ಲಿ ಉತ್ತೀರ್ಣರಾಗಿರಬೇಕು. ಸರ್ಕಾರಿ/ ಸರ್ಕಾರದಿಂದ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರಬೇಕು.

**ಸಲ್ಲಿಸಬೇಕಾದ ದಾಖಲೆಗಳು:** ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಾರ್ಷಿಕ ಪರೀಕ್ಷೆಯಲ್ಲಿ ಪಾಸಾದ ಅಂಕಪಟ್ಟಿ, ಆನ್‌ಲೈನ್‌ನಲ್ಲಿ ಶಾಲಾ ಮುಖ್ಯಸ್ಥರ ಮೂಲಕ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ವಿವರಗಳಿಗೆ ಆಯಾ ಶಾಲಾ ಮುಖ್ಯೋಪಾಧ್ಯಾಯರು/ ತಾಲೂಕು ಬಿ.ಇ.ಓ/ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

**ಮೆಟ್ರಿಕ್ ನಂತರ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹ ಧನ:** ಅಲೆಮಾರಿ/ ಅರೆ ಅಲೆಮಾರಿ ಜನಾಂಗಕ್ಕೆ ಸೇರಿದ ವಿದ್ಯಾರ್ಥಿಗಳ ಮೆಟ್ರಿಕ್ ನಂತರದ ಶಿಕ್ಷಣವನ್ನು ಮುಂದುವರೆಸಲು ಆರ್ಥಿಕ ನೆರವು ನೀಡುವುದರ ಮೂಲಕ ಮಧ್ಯದಲ್ಲಿ ಕಾಲೇಜು ಬಿಡುವವರ ಪ್ರಮಾಣ ಕಡಿಮೆ ಮಾಡಲು ಹಾಗೂ ಈ ಶಿಕ್ಷಣ ಹಂತ ಮುಂದುವರೆಸುವ ಉದ್ದೇಶದಿಂದ ಕಾರ್ಯಕ್ರಮ ಜಾರಿಗೊಳಿಸಲಾಗಿದೆ. ಪಿಯುಸಿ ಮತ್ತು ಡಿಪ್ಲೋಮಾ ವಿದ್ಯಾರ್ಥಿಗಳಿಗೆ 300 ರೂ, ಪದವಿ ಮತ್ತು ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳಿಗೆ 400 ರೂ, ಸಿಇಟಿ ಮೂಲಕ ಸರ್ಕಾರಿ ಕೋಟಾದಲ್ಲಿ ಬಿಇ ಎಂ, ಬಿ.ಬಿ.ಎಸ್, ಬಿ.ಡಿ.ಎಸ್ ತತ್ಸಮಾನವಾದ ಇನ್ನಿತರ ತಾಂತ್ರಿಕ / ವೃತ್ತಿಪರ ಕೋರ್ಸುಗಳಿಗೆ 500 ರೂನಂತೆ 10 ತಿಂಗಳು ನೀಡಲಾಗುತ್ತಿದೆ.

**ಅರ್ಹತೆಗಳು:** ಅಲೆಮಾರಿ/ ಅರೆ ಅಲೆಮಾರಿ ಜನಾಂಗಕ್ಕೆ ಸೇರಿರಬೇಕು. ಕುಟುಂಬದ ಒಟ್ಟು ವಾರ್ಷಿಕ ಆದಾಯ ರೂ.2.50 ಲಕ್ಷ ರೂ ಒಳಗಿರಬೇಕು. ಹಿಂದಿನ ವರ್ಷದಲ್ಲಿ ಎಲ್ಲ ವಿಷಯಗಳಲ್ಲಿ ಉತ್ತೀರ್ಣರಾಗಿರಬೇಕು. ಸರ್ಕಾರಿ/ ಸರ್ಕಾರದಿಂದ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರಬೇಕು. ವಿದ್ಯಾರ್ಥಿಯು ಇನ್ನಾವುದೇ ವಿದ್ಯಾರ್ಥಿ ವೇತನ ಅಥವಾ ಉಚಿತ ವಸತಿ ನಿಲಯದಲ್ಲಿ ಪ್ರವೇಶ ಪಡೆದಿರಬಾರದು.

ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಾರ್ಷಿಕ ಪರೀಕ್ಷೆಯಲ್ಲಿ ಪಾಸಾದ ಅಂಕಪಟ್ಟಿಗಳೊಂದಿಗೆ ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಬೇಕು. ಹೆಚ್ಚಿನ ವಿವರಗಳಿಗಾಗಿ ಆಯಾ ತಾಲೂಕಾ ಹಿಂದುಳಿದ ವರ್ಗಗಳ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

### ವಸತಿ ಸೌಲಭ್ಯ

ಅಲೆಮಾರಿ/ ಅರೆ ಅಲೆಮಾರಿ ಜನಾಂಗದವರಿಗಾಗಿ ನಿವೇಶನ ರಹಿತರಿಗೆ ಹಾಗೂ ಗುಡಿಸಲುಗಳಲ್ಲಿ ವಾಸಿಸುತ್ತಿರುವವರಿಗೆ ನಿರ್ದಿಷ್ಟ ನೆಲೆಯಿಲ್ಲದೇ ಒಂದು ಪ್ರದೇಶದಿಂದ ಇನ್ನೊಂದು ಪ್ರದೇಶಕ್ಕೆ ವಲಸೆ ಹೋಗುವವರಿಗೆ ಒಂದೆ ಕಡೆ ನೆಲೆ ನಿಲ್ಲುವಂತೆ ಮಾಡುವುದು ಕಾರ್ಯಕ್ರಮದ ಉದ್ದೇಶವಾಗಿದೆ.

ವಸತಿ ರಹಿತ ಹಾಗೂ ಗುಡಿಸಲುಗಳಲ್ಲಿ ವಾಸಿಸುತ್ತಿರುವ ನಿವೇಶನ ರಹಿತರಿಗೆ ಎಲ್ಲ ಮೂಲಭೂತ ಸೌಲಭ್ಯಗಳನ್ನು ಒಳಗೊಂಡ ಮನೆಗಳನ್ನು ಒದಗಿಸಲಾಗುವುದು. ಅಲೆಮಾರಿ/ ಅರೆ ಅಲೆಮಾರಿ ಜನಾಂಗಕ್ಕೆ ಸೇರಿರಬೇಕು. ಅಭ್ಯರ್ಥಿಯ ಹೆಸರಿನಲ್ಲಿ ನಿವೇಶನ ಇರಬಾರದು. ಹೆಚ್ಚಿನ ವಿವರಗಳಿಗೆ ಜಿಲ್ಲಾ ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಥವಾ ಆಯಾ ತಾಲೂಕ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ.

**ನಿವೇಶನ ಹಂಚಿಕೆಗಾಗಿ ಜಮೀನು ಖರೀದಿ:** ಅಲೆಮಾರಿ/ ಅರೆ ಅಲೆಮಾರಿ ಜನಾಂಗದ ಹೆಚ್ಚಿನ ಕುಟುಂಬಗಳು ನಿವೇಶನವಿಲ್ಲದೆ ವಸತಿ ಸೌಲಭ್ಯವನ್ನು ಪಡೆಯಲು ಸಾಧ್ಯವಾಗುತ್ತಿಲ್ಲ. ಇವರನ್ನು ಒಂದು ಕಡೆ ನೆಲೆ ನಿಲ್ಲುವಂತೆ ಮಾಡಲು ನಿವೇಶನವನ್ನು ಒದಗಿಸಿ ವಸತಿ ಸೌಲಭ್ಯ ಕಲ್ಪಿಸಲು ಸರ್ಕಾರಿ ಜಮೀನನ್ನು ಗುರುತಿಸಿ ಹಂಚುವ ಉದ್ದೇಶದಿಂದ ಕಾರ್ಯಕ್ರಮ ಜಾರಿಗೊಳಿಸಲಾಗಿದೆ.

ಅಲೆಮಾರಿ ಜನಾಂಗದ ನಿವೇಶನರಹಿತರಿಗೆ ಸರ್ಕಾರದಿಂದ ಉಚಿತವಾಗಿ ನಿವೇಶನ ಒದಗಿಸುವುದು. ಅಲೆಮಾರಿ/ ಅರೆ ಅಲೆಮಾರಿ ಜನಾಂಗಕ್ಕೆ ಸೇರಿರಬೇಕು. ಅಭ್ಯರ್ಥಿಯ ಹೆಸರಿನಲ್ಲಿ ನಿವೇಶನ ಇರಬಾರದು.

ಹೆಚ್ಚಿನ ವಿವರಗಳಿಗಾಗಿ ಜಿಲ್ಲಾ ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಆಯಾ ತಾಲೂಕ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ.

## ದಸರಾ ಉದ್ಘಾಟನೆಗೆ ವಿರೋಧ: ಟೀಕಾಕಾರರಿಗೆ ಬಾನು ಮುಷ್ತಾಕ್ ತಿರುಗೇಟು!

■ ವಿಜಯಸಾಕ್ಷಿ ಸುದ್ದಿ, ಹಾಸನ

ದಸರಾ ಉದ್ಘಾಟನೆಗೆ ತಮ್ಮ ಹೆಸರು ಆಯ್ಕೆ ನಂತರ ಅಪಸ್ವರದ ಬಗ್ಗೆ ಬಾನು ಮುಷ್ತಾಕ್ ಪ್ರತಿಕ್ರಿಯೆ ಕೊಟ್ಟಿದ್ದು, ಟೀಕಾಕಾರರಿಗೆ ತಿರುಗೇಟು ಕೊಟ್ಟಿದ್ದಾರೆ.

ಈ ಬಗ್ಗೆ ನಾನು ಏನು ಮಾತನಾಡಲ್ಲ. ಕೋಟ್ಯಾಂತರ ಕನ್ನಡಿಗರು ಎಷ್ಟೊಂದು ಪ್ರೀತಿ ಅಭಿಮಾನ ಕೊಡುತ್ತಿದ್ದಾರೆ. ಒಬ್ಬರು ಅಥವಾ ಇಬ್ಬರ ನೆಗೆಟಿವಿಟಿಗೆ ಯಾಕೆ ಪ್ರತಿಕ್ರಿಯೆ ಕೊಡಬೇಕು. ಅದರ ಅಗತ್ಯ ಇಲ್ಲ ಎನ್ನಿಸುತ್ತೆ. ವಿರೋದ ಪಕ್ಷ ಆಡಳಿತ ಪಕ್ಷ ಇರಬೇಕು. ರಾಜಕೀಯ ಮಾಡಬೇಕು. ಆದರೆ ಯಾವ ವಿಚಾರದಲ್ಲಿ ರಾಜಕೀಯ ಮಾಡಬೇಕು ಯಾವುದರಲ್ಲಿ ಮಾಡಬಾರದು ಎನ್ನುವ ಪ್ರಜ್ಞೆ ಸಕ್ರಿಯ ರಾಜಕಾರಣಿ ಗಳಿಗೆ ಇರಬೇಕಾಗುತ್ತೆ ಎಂದು ಬಿಜೆಪಿ ನಾಯಕರಿಗೆ ಪರೋಕ್ಷವಾಗಿ ತಿರುಗೇಟು ನೀಡಿದರು. ಬಿಜೆಪಿ ಪಕ್ಷದಲ್ಲಿ ಮೈಸೂರಿನ ಸಂಸದ ಯದುವೀರ್ ಅಂತಹವರ ಸಂತತಿ ಹೆಚ್ಚಾಗಲಿ ಎಂದು ಅಪೇಕ್ಷೆ ಪಡುತ್ತೇನೆ.

## ಕಾರಲ್ಲಿಯೇ ವಿಸಿ ಮೀಟಿಂಗ್ ಮಾಡಿದ ಕಂದಾಯ ಸಚಿವರು!

■ ವಿಜಯಸಾಕ್ಷಿ ಸುದ್ದಿ, ಹಾಸನ

ಹಾಸನಕ್ಕೆ ತೆರಳುವ ಮಾರ್ಗದ ನಡುವೆಯೇ ಕಾರಿನಲ್ಲಿ ಕುಳಿತು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ನಡೆಸಿ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

ಮಂಗಳವಾರ ಹಾಸನಕ್ಕೆ ಭೇಟಿ ನೀಡಿದ್ದ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಮಾರ್ಗ ಮಧ್ಯೆ ಕಾರಿನಲ್ಲಿ ರಾಜ್ಯಾದ್ಯಂತ ಮಳೆ-ಬೆಳೆಹಾನಿ ಸಂಬಂಧ ಎಲ್ಲಾ ಜಿಲ್ಲಾಧಿಕಾರಿಗಳು, ವಿಪತ್ತು ನಿರ್ವಹಣಾ ಇಲಾಖೆ ಪ್ರಧಾನ ಕಾರ್ಯದರ್ಶಿ ಹಾಗೂ ಆಯುಕ್ತರ ಜೊತೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಿದ್ದಾರೆ.

ಕೃಷ್ಣ ಬೈರೇಗೌಡ ಅವರ ಈ ಕಾರ್ಯವೈಖರಿಗೆ ಸಾರ್ವಜನಿಕ ವಲಯದಲ್ಲಿ ಮೆಚ್ಚುಗೆ ವ್ಯಕ್ತವಾಗಿದೆ.

ರೈತರ ಜಮೀನುಗಳಿಗೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಭೇಟಿ, ಪರಿಶೀಲನೆ

# ಪರಿಹಾರ ಕಲ್ಪಿಸಲು ಪ್ರಾಮಾಣಿಕ ಪ್ರಯತ್ನ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸತತ ಮಳೆಯಿಂದ ಮುಂಗಾರಿನ ಬೆಳೆಗಳು ಹಾನಿಗೀಡಾದ ತಾಲೂಕಿನ ರೈತರ ಜಮೀನುಗಳಿಗೆ ಮಂಗಳವಾರ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಭೇಟಿ ನೀಡಿ ವಸ್ತುಸ್ಥಿತಿ ಪರಿಶೀಲಿಸಿದರು.

ತಾಲೂಕಿನ ಮಾಡಳ್ಳಿ ಗ್ರಾಮದ ಬಸನಗೌಡ ಪಾಟೀಲ ಅವರ ಜಮೀನಿನಲ್ಲಿ ಹೆಸರು ಬೆಳೆ ಕಟಾವು ಪ್ರಕ್ರಿಯೆ/ಪ್ರಾತ್ಯಕ್ಷಿಕೆ, ಮಳೆಯಿಂದ ಹಾಳಾದ ಬೆಳೆ, ಯಂತ್ರಗಳ ಸಹಾಯದಿಂದ ಬೆಳೆ ಕಟಾವು ಮಾಡುತ್ತಿರುವುದು, ಒಕ್ಕಲಿಯಾದ ಹೆಸರು ಕಾಳಿನ ಗುಣಮಟ್ಟ ಪರಿಶೀಲಿಸಿದರು.

ಈ ವೇಳೆ ಕೆಸಿಸಿ ಬ್ಯಾಂಕ್ ನಿರ್ದೇಶಕ ಜಿ.ವಿ. ಪಾಟೀಲ ಮತ್ತು ರೈತರನೇಕರು ಸತತ ಮಳೆಯಿಂದ



ಮುಂಗಾರಿನ ಪ್ರಮುಖ ವಾಣಿಜ್ಯ ಬೆಳೆ ಹೆಸರು ಸೇರಿ ಬಹುತೇಕ ಬೆಳೆಗಳು ಹಾಳಾಗಿವೆ. ಮುಂಗಾರಿನ ಕೃಷಿಗೆ ಮಾಡಿದ ಸಾಲ ತೀರಿಸುವುದು ಹೇಗೆ, ಹಿಂಗಾರಿಗೆ ಮತ್ತೆ ಭೂಮಿ ಹದಗೊಳಸಬೇಕು. ಬದುಕು ಸಾಗಿಸುವುದು ಹೇಗೆಂಬ ಚಿಂತೆಯಲ್ಲಿ ರೈತರಿದ್ದೇವೆ. ಅನಕ್ಷರಸ್ಥ ರೈತರನೇಕರು ಮಾಹಿತಿ ಕೊರತೆಯಿಂದಲೂ, ಆರ್ಥಿಕ ಮುಗ್ಗಟ್ಟಿನಿಂದಲೂ ಬೆಳೆವಿಮೆ ಪಾವತಿಸಿಲ್ಲ. ಸಂಕಷ್ಟದ ಸುಳಿಯಲ್ಲಿ ಸಿಕ್ಕು ಒದ್ದಾಡುತ್ತಿರುವ ರೈತರಿಗೆ ಬೆಳೆವಿಮೆ, ಬೆಳೆಹಾನಿ ಪರಿಹಾರ ಕಲ್ಪಿಸುವ ಮೂಲಕ ಹಿತ ಕಾಪಾಡುವ ಕೆಲಸ ಮಾಡಿ ಎಂದು ಮನವಿ ಮಾಡಿದರು.

ಅತಿಯಾದ ಮಳೆಯಿಂದ ಗದಗ ಜಿಲ್ಲೆಯಾದ್ಯಂತ ಮುಂಗಾರಿನ ಬೆಳೆಗಳು ಹಾನಿಗೀಡಾಗಿವೆ. ರೈತರು ನಷ್ಟಕ್ಕೊಳಗಾಗಿದ್ದಾರೆ. ಈ ಬಗ್ಗೆ ಕೃಷಿ, ಕಂದಾಯ, ತೋಟಗಾರಿಕೆ ಇಲಾಖೆಯಿಂದ ಜಂಟಿ ಸಮೀಕ್ಷಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು. ಜಿಲ್ಲಾ ಉಸ್ತುವಾರಿ ಸಚಿವರೂ ಸಹ ಖುದ್ದಾಗಿ ರೈತರ ಜಮೀನುಗಳಿಗೆ ತೆರಳಿ ಪರಿಶೀಲಿಸಿ ಮಾಹಿತಿ ಪಡೆದಿದ್ದಾರೆ. ವಸ್ತುಸ್ಥಿತಿಯನ್ನು ಸರ್ಕಾರದ ಗಮನಕ್ಕೆ ತರಲಿದ್ದಾರೆ. ರೈತರಿಗೆ ಬೆಳೆಹಾನಿ ಪರಿಹಾರ ಕಲ್ಪಿಸುವ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲಾಧಿಕಾರಿಗಳು ಮಾತನಾಡಿ, ಸಂಬಂಧಪಟ್ಟವರು ಬೆಳೆ ಕಟಾವು ಮಾಡಲು ಬಂದ ಸಂದರ್ಭದಲ್ಲಿ ಅವರಿಗೆ ಇಳುವರಿ ಕಡಿಮೆ ತೋರಿಸುವಂತೆ ಒತ್ತಾಯಿಸುವುದು, ಬೆಳೆವಿಮೆಯನ್ನು ಏಜಂಟರಿಗೆ ಕೊಡುವುದು ಸರಿಯಾದ ಕ್ರಮವಲ್ಲ. ಇದು ನಾವು ಮಾಡುವ ಸ್ವಯಂಕೃತ ಅಪರಾಧವಾಗುತ್ತದೆ. ಇದರಿಂದ ಭವಿಷ್ಯದ ದಿನಮಾನಗಳಲ್ಲಿ ವಿಮಾ ಸೌಲಭ್ಯದಿಂದ ವಂಚಿತರಾಗತ್ತಾರೆ ಎಂದರು. ಈ ವೇಳೆ ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಉಪತಹಸೀಲ್ದಾರ ಮಂಜುನಾಥ ಅಮಾಸಿ, ಕಂದಾಯ ನಿರೀಕ್ಷಕ ಎನ್.ಎ. ನದಾಫ್, ಸಾಂಖ್ಯಿಕ ಅಧಿಕಾರಿ ಸುರೇಶ ಸಿಂದಗಿ, ಪ್ರಕಾಶ ಸಿಂದಗಿ, ಹನಮಂತ ಚಿಂಚಲಿ, ಫಕ್ಕಣ್ಣ ನಾಯಕರ, ಅಜ್ಜು ಹೂಗಾರ, ಮುತ್ತಪ್ಪ ಪಾಟೀಲ, ಗ್ರಾಮ ಆಡಳಿತಾಧಿಕಾರಿ ಡಿ.ಎಲ್. ವಿಭೂತಿ ಮುಂತಾದವರಿದ್ದರು.

## ಸಾರ್ವಜನಿಕರ ಸುರಕ್ಷತೆಗೆ ಪ್ರಥಮಾದ್ಯತೆ ನೀಡಿ

▶▶ ಮೊದಲನೇ ಪುಟದಿಂದ

ಸಮರ್ಥವಾಗಿ ನಿಭಾಯಿಸಲು ಎಲ್ಲ ಅಧಿಕಾರಿಗಳು ಸನ್ನದ್ಧರಾಗಬೇಕು. ತಾಲೂಕು ಮಟ್ಟದಲ್ಲಿಯೂ ಟಾಸ್ಕ್ ಫೋರ್ಸ್ ಸಮಿತಿ ಸಭೆ ನಿಯಮಿತವಾಗಿ ಜರುಗಿಸಿ ವರದಿಯನ್ನು ಜಿಲ್ಲಾಡಳಿತಕ್ಕೆ ಸಲ್ಲಿಸಬೇಕು ಎಂದರು.

ಉಪವಿಭಾಗಾಧಿಕಾರಿ ಗಂಗಪ್ಪ ಎಂ ಮಾತನಾಡಿ, ಪ್ರವಾಹ ಪರಿಸ್ಥಿತಿ ನಿರ್ವಹಣೆಗೆ ಈಗಾಗಲೇ ಪೂರ್ವ ಸಿದ್ಧತೆ ಮಾಡಿಕೊಳ್ಳಲಾಗಿದೆ. ಪ್ರಸ್ತುತ ಸುರಿದ ಮಳೆಯಿಂದ ಯಾವುದೇ ಮಾನವ ಜೀವ ಹಾನಿ ಹಾಗೂ ಜಾನುವಾರು ಹಾನಿಯಾಗಿರುವುದಿಲ್ಲ ಎಂದು ತಿಳಿಸಿದರು.

ಸಭೆಯಲ್ಲಿ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರು, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಶಶಿಕಾಂತ ಕೋಟಿಮನಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಎಸ್. ನೀಲಗುಂದ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ, ತಹಸೀಲ್ದಾರರು, ಕಾರ್ಯನಿರ್ವಾಹಕ ಅಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ಹಿಂದೂಗಳ ಧಾರ್ಮಿಕ ಭಾವನೆಗೆ ಅಪಮಾನ

▶▶ ಮೊದಲನೇ ಪುಟದಿಂದ

ರಾಜ್ಯದ ಸಿಎಂ ಮತ್ತು ಡಿಸಿಎಂ ರಾಜ್ಯದ ಜನತೆಯ ಕ್ಷಮೆಯಾಚನೆ ಮಾಡಬೇಕೆಂದು ಒತ್ತಾಯಿಸಿದರು.

ಬಿಜೆಪಿ ಶಿರಹಟ್ಟಿ ಮಂಡಲದ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ನಗರ ಘಟಕದ ಅಧ್ಯಕ್ಷ ನಾಗರಾಜ ಲಕ್ಕುಂಡಿ, ಜಿ.ಪಂ ಮಾಜಿ ಸದಸ್ಯ ಶಿವಪ್ರಕಾಶ ಮಹಾಜನಶೆಟ್ಟರ, ಬಿ.ಡಿ. ಪಲ್ಲೇದ, ಜಾನು ಲಮಾಣಿ, ಫಕ್ಕೀರೇಶ ರಟ್ಟಿಹಳ್ಳಿ, ಸಂತೋಷ ಕುರಿ, ತಿಮ್ಮರಡ್ಡಿ ಮರಡ್ಡಿ, ಮೋಹನ ಗುತ್ತೆಮ್ಮನವರ, ಅಕ್ಬರಸಾಬ ಯಾದಗಿರಿ, ಬಸವರಾಜ ವಡವಿ, ಶಿವಣ್ಣ ಲಮಾಣಿ, ನಂದಾ ಪಲ್ಲೇದ, ಅನಿಲ ಮುಳಗುಂದ, ಪ್ರವೀಣ ಪಾಟೀಲ, ಅಶೋಕ ಶಿರಹಟ್ಟಿ, ಹಾಲಪ್ಪ ಸೂರಣಗಿ, ಕಿರಣ ಮಹಾಂತಶೆಟ್ಟರ, ಬಸವರಾಜ ಕಲ್ಲೂರ ಮುಂತಾದವರು ಉಪಸ್ಥಿತರಿದ್ದರು.

# ಹಬ್ಬದ ಖುಷಿಯೂ 'ಮಳೆ'ಪಾಲು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮುಂಗಾರಿನ ಬೆಳೆಹಾನಿ ಸಂಕಷ್ಟದ ನಡುವೆಯೂ ಸಂಪ್ರದಾಯವೆನ್ನುವಂತೆ ಸಕಲ ಕಷ್ಟಗಳ ಪರಿಹರಿಸುವ ಗಣೇಶನನ್ನು ಬರಮಾಡಿಕೊಳ್ಳುವ ಗಣೇಶ ಚತುರ್ಥಿ ಹಬ್ಬದ ಖುಷಿಯನ್ನು ಮಳೆ ಕಸಿದುಕೊಳ್ಳುತ್ತಿದೆ.

ಮಂಗಳವಾರ ಸಂಜೆಯೂ ಮಳೆ ಸುರಿದ ಪರಿಣಾಮ ಗಣೇಶನ ಪೂಜೆಗೆ ಬೇಕಾಗುವ ಪೂಜಾ ಸಾಮಗ್ರಿಗಳ ಖರೀದಿ ಆಗಮಿಸಿದ್ದ ಜನರು, ಬೀದಿ ಬದಿ ವ್ಯಾಪಾರಸ್ಥರು ಪರದಾಡಿದರು. ಮಳೆಯಿಂದ ವ್ಯಾಪಾರಕ್ಕೆ ಅಡ್ಡಿಯಾಯಿತು. ಮಳೆ ಕೊಂಚ ಬಿಡುವು ಕೊಟ್ಟಿದ್ದರಿಂದ ಅಳಿದುಳಿದ ಬೆಳೆ ಕಟಾವು, ಒಕ್ಕಲಿ ಮಾಡುತ್ತಿರುವ ರೈತರು ಬೆಳೆ/ಮಹಸೀಲು ಸಂರಕ್ಷಿಸಲು ಪರದಾಡಿದರು. ಮಳೆ ಮುಂದುವರೆಯುತ್ತದೆ ಎಂಬ ಮಾಹಿತಿಯಿಂದ ರೈತ ಸಮುದಾಯಕ್ಕೆ ದಿಕ್ಕು ತೋಚದಂತಾಗಿದೆ. ವಿಘ್ನ ವಿನಾಶಕನೇ ರೈತರನ್ನು ಸಂಕಷ್ಟದಿಂದ ಪಾರು ಮಾಡಬೇಕಷ್ಟೇ.

## ಛಲವಾದಿ ಸಮಾಜದಿಂದ ವಿಜಯೋತ್ಸವ, ಶಾಸಕ ಜಿ.ಎಸ್. ಪಾಟೀಲರಿಗೆ ಸನ್ಮಾನ

# ಒಳ ಮಿಸಲಾತಿಯಿಂದ ಎಲ್ಲ ಸಮುದಾಯಗಳಿಗೂ ನ್ಯಾಯ

■ವಿಜಯಸಾಕ್ಷಿ ಸುದ್ದಿ, ರೋಣ

ರಾಜ್ಯ ಸರಕಾರ ಜಾರಿಗೊಳಿಸಿದ ಒಳ ಮಿಸಲಾತಿಯಿಂದ ಎಲ್ಲ ಸಮುದಾಯಗಳಿಗೂ ನ್ಯಾಯ ಸಿಕ್ಕಿದೆ ಎಂದು ಕೆಪಿಸಿಸಿ ಸದಸ್ಯ, ರೋಣ-ಗಜೇಂದ್ರಗಡ ತಾಲೂಕಿನ ಛಲವಾದಿ ಸಮಾಜದ ಅಧ್ಯಕ್ಷ ಸಂಜಯ ದೊಡ್ಡಮನಿ ಹೇಳಿದರು.

ಅವರು ಮಂಗಳವಾರ ಸಮಾಜದ ಮುಖಂಡರೊಂದಿಗೆ ಶಾಸಕ ಜಿ.ಎಸ್. ಪಾಟೀಲರನ್ನು ಸನ್ಮಾನಿಸಿ ಮಾತನಾಡಿದರು.

ಒಳ ಮಿಸಲಾತಿ ಜಾರಿಯಾಗಬೇಕು ಎನ್ನುವುದು 35 ವರ್ಷಗಳ ನಿರಂತರ ಹೋರಾಟವಾಗಿತ್ತು. ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಯಾವ ಸಮುದಾಯಕ್ಕೂ ಅನ್ಯಾಯವಾಗದ ರೀತಿಯಲ್ಲಿ ನ್ಯಾಯ ಸಮ್ಮತವಾಗಿ ಮೀಸಲಾತಿಯನ್ನು



ಹಂಚಿಕೆ ಮಾಡುವ ಮೂಲಕ ಸಂವಿಧಾನದ ಮೂಲ ತತ್ವಗಳನ್ನು ಎತ್ತಿ ಹಿಡಿದಿದೆ ಎಂದರು.

ಮುಖಂಡ ಶರೀಪ ಬಿಳೆಯಲಿ ಮಾತನಾಡಿ, ರಾಜ್ಯ ಸರಕಾರದ ನಿರ್ಧಾರವನ್ನು ಛಲವಾದಿ ಸಮಾಜ ತುಂಬು ಮನಸ್ಸಿನಿಂದ ಸ್ವಾಗತಿಸಿದೆ. ಮೀಸಲಾತಿ ಹಂಚಿಕೆಯಲ್ಲಿ ಸರಕಾರ ಸಮಾನತೆಯನ್ನು ತೋರಿದ್ದು, ಇಲ್ಲಿ ಯಾವ ಸಮಾಜಕ್ಕೂ ತೊಂದರೆಯಾಗಿಲ್ಲ. ಮುಖ್ಯವಾಗಿ ಒಳ ಮೀಸಲಾತಿ ಜಾರಿಯ ಲಾಭ ನಮ್ಮ ಪೀಳಿಗೆಗೆ ಸಹಾಯಕವಾಗಲಿದೆ. ಸಮಾಜದ ಬಂಧುಗಳು ಸರಕಾರ ಜಾರಿಗೆ ತಂದಿರುವ ಮೀಸಲಾತಿ ಲಾಭವನ್ನು ಪಡೆದುಕೊಂಡು ನಾಡಿಗೆ, ದೇಶಕ್ಕೆ ತಮ್ಮ ಕೊಡುಗೆಯನ್ನು ನೀಡಬೇಕು ಎಂದರು.

> ಕಾಂಗ್ರೆಸ್ ಪಕ್ಷ ಸಂವಿಧಾನದ ಅಡಿಯಲ್ಲಿ ಮತ್ತು ತತ್ವಗಳಲ್ಲಿ ನಂಬಿಕೆಯನ್ನು ಹೊಂದಿ ಎಲ್ಲ ವರ್ಗದ ಜನರಿಗೆ ಸಾಮಾಜಿಕ ನ್ಯಾಯ ಸಿಗಬೇಕು ಎಂಬ ದೃಢವಾದ ನಿಲುವು ಹೊಂದಿದೆ. ಯಾವುದೇ ಸಮಾಜಕ್ಕೆ ಅನ್ಯಾಯವಾಗಬಾರದು ಎಂಬ ಉದ್ದೇಶದಿಂದ ಒಳ ಮಿಸಲಾತಿಯನ್ನು ಜಾರಿಗೆ ತಂದಿದ್ದು, ಎಲ್ಲ ಸಮುದಾಯಗಳು ಒಪ್ಪಿಕೊಂಡಿರುವುದು ಸ್ವಾಗತಾರ್ಹ.
>
> **– ಜಿ.ಎಸ್. ಪಾಟೀಲ.**
> ಶಾಸಕರು, ರೋಣ.

ಇದೇ ಸಂದರ್ಭದಲ್ಲಿ ರೋಣ, ಗಜೇಂದ್ರಗಡ ತಾಲೂಕಿನಿಂದ ಆಗಮಿಸಿದ್ದ ಛಲವಾದಿ ಸಮಾಜದ ಮುಖಂಡರು ಶಾಸಕ ಜಿ.ಎಸ್. ಪಾಟೀಲರನ್ನು ಸನ್ಮಾನಿಸಿದರು.

ಕೆಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ಐ.ಎಸ್. ಪಾಟೀಲ, ವಿ.ಬಿ. ಸೋಮನಕಟ್ಟಿಮಠ, ಯೂಸುಪ್ ಇಟಗಿ, ಬಸವರಾಜ ನವಲಗುಂದ, ಜಿಲ್ಲಾಧ್ಯಕ್ಷ ಆನಂದ ಶಿಂಗಾರಿ, ಪುರಸಭೆ ಉಪಾಧ್ಯಕ್ಷ ಹನ್ಮಂತಪ್ಪ ತಳ್ಳಿಕೇರಿ, ಹನ್ಮಂತಪ್ಪ ದೊಡ್ಡಮನಿ, ಶಿವಾನಂದ ಲಂಕೇಶ, ಮಾರುತಿ ಛಲವಾದಿ, ಮುತ್ತುರಾಜ ದೊಡ್ಡಮನಿ, ಶಂಕ್ರಪ್ಪ ಛಲವಾದಿ, ಸತ್ಯಪ್ಪ ಸತ್ಯಮ್ಮನವರ, ಬಸವರಾಜ ಬೆಟಗೇರಿ, ಸುರೇಶ ಬೆನಹಾಳ, ಶೇಖಪ್ಪ ತಿರಗಾರ, ಹನ್ಮಪ್ಪ ಕೊಳ್ಳಪ್ಪನವರ, ಫಕ್ಕಿರಪ್ಪ ಛಲವಾದಿ, ಬಾಳಪ್ಪ ಛಲವಾದಿ ಸೇರಿದಂತೆ ಸಮಾಜದ ಮುಖಂಡರು ಉಪಸ್ಥಿತರಿದ್ದರು.



ತಮ್ಮ 3 ಎಕರೆ ಜಮೀನನ್ನು ಶಿಕ್ಷಣ ಮತ್ತು ಧರ್ಮ ಕಾರ್ಯಕ್ಕೆ ದಾನ ನೀಡಿದ ಶಿರಹಟ್ಟಿ ಪಟ್ಟಣದ ನಿವಾಸಿ ರಶೀದ್ ಥಾಲಾಯತ್ ಹಾಗೂ ಇತರ ಸಾಧಕ ಮಹನೀಯರನ್ನು ಕರ್ನಾಟಕ ರಾಜ್ಯ ಸರ್ಕಾರಿ ಮುಸ್ಲಿಂ ನೌಕರರ ಕ್ಷೇಮಾಭಿವೃದ್ಧಿ ಸಂಘವು ಗದುಗಿನ ಕನಕ ಭವನದಲ್ಲಿ ಏರ್ಪಡಿಸಿದ್ದ ಪ್ರತಿಭಾ ಪುರಸ್ಕಾರ, ನಾಗರಿಕ ಹಾಗೂ ನಿವೃತ್ತ ನೌಕರರಿಗೆ ಸನ್ಮಾನ ಸಮಾರಂಭದಲ್ಲಿ ಗದಗ ಜಿಲ್ಲಾ ಘಟಕವು ಸನ್ಮಾನಿಸಿ ಗೌರವಿಸಿತು.

## ರಾಜಕೀಯ ಕುತಂತ್ರಕ್ಕೆ ಧರ್ಮಸ್ಥಳ ಬಲಿ ಆಗಬಾರದು: ಡಿಕೆ ಶಿವಕುಮಾರ್!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜಕೀಯ ಕುತಂತ್ರಕ್ಕೆ ಧರ್ಮಸ್ಥಳ ಬಲಿ ಆಗಬಾರದು ಎಂದು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿದ್ದಾರೆ.

ಈ ಸಂಬಂಧ ನಗರದಲ್ಲಿ ಮಾತನಾಡಿದ ಅವರು, ಬಿಜೆಪಿಯವರು ಧರ್ಮಸ್ಥಳವನ್ನ ಅಶುದ್ಧ ಮಾಡುತ್ತಿದ್ದಾರೆ. ನಾನು ಹೆಗಡೆ ಅವರಿಗೆ ಮನವಿ ಮಾಡ್ತೀನಿ. ಈ ಕ್ಷೇತ್ರ ದುರ್ಬಳಕೆ ಮಾಡಿಕೊಳ್ಳೋಕೆ ಬಿಡಬಾರದು. ಧರ್ಮಸ್ಥಳದ ಈ ಕೇಸ್ ಬಿಜೆಪಿಯ ಎರಡು ಗುಂಪಿನ ಇಂಟ್ರನಲ್ ಫೈಟ್‌ನಿಂದ ನಡೆಯುತ್ತಿದೆ ಎಂದಿದ್ದಾರೆ.

ನಾನು ಆನ್ ರೆಕಾರ್ಡ್ ಹೇಳುತ್ತಿದ್ದೇನೆ. ಈಗ ಯಾರು ಅರೆಸ್ಟ್ ಆಗಿದ್ದಾರೆ. ಅರೆಸ್ಟ್ ಆಗಿರೋರು ಏನು ಹೇಳಿದ್ರು. ಬಿಜೆಪಿಯ ಎರಡು ಗುಂಪುಗಳು ಮತ್ತು ಅದರ ಸಂಘಟನೆಗಳಿಂದ ಆಗುತ್ತಿದೆ.

# ರಾಚೋಟಿ ವೀರಭದ್ರೇಶ್ವರ ಜಯಂತ್ಯುತ್ಸವ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಇತಿಹಾಸ ಪ್ರಸಿದ್ಧ ಒಕ್ಕಲಗೇರಿ ಓಣಿಯ ಶ್ರೀ ರಾಚೋಟಿ ವೀರಭದ್ರೇಶ್ವರ ಜಯಂತ್ಯುತ್ಸವವು ವಿಜ್ರಂಭಣೆಯಿಂದ ನೆರವೇರಿತು.

ಬೆಳಿಗ್ಗೆ ಮಹಾ ರುದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ ನಡೆಯಿತು. ಉತ್ಸವ ಮೂರ್ತಿಯನ್ನು ಪಲ್ಲಕ್ಕಿಯಲ್ಲಿ ನಗರದ ಪ್ರಮುಖ ಬೀದಿಯಲ್ಲಿ ಮೆರವಣಿಗೆ ನಡೆಸಲಾಯಿತು.

ಎಲ್ಲ ಕಾರ್ಯಕ್ರಮಗಳಲ್ಲಿ ಟ್ರಸ್ಟ್ ಕಮಿಟಿಯ ಸದಸ್ಯರಾದ ಎಂ.ಎಂ. ಹಿರೇಮಠ, ಕೊಟ್ರಪ್ಪ ಕಮತರ, ಶಿವಣ್ಣ ಕತ್ತಿ, ಮುರಿಗೆಪ್ಪ ನಾಲ್ವಾಡ, ಹಿರಿಯರಾದ ವಿರೂಪಾಕ್ಷಪ್ಪ ಅಕ್ಕಿ, ಶೇಖಪ್ಪ ಹೊಂಬಳ, ಸಿದ್ದಣ್ಣ ಅರಳಿ, ಶಶಿಧರಯ್ಯ ನಂದಿಕೋಲಮಠ, ತೋಟಪ್ಪ ಕರಮೂಡಿ, ವಿಜಯಕುಮಾರ ನಂದಿಕೋಲಮಠ, ಶಂಕ್ರಪ್ಪ ಲಕ್ಕುಂಡಿ, ಬಸಯ್ಯ ಹೆಸರೂರಮಠ, ಗಂಗಾಧರ ಕೋರಿ, ಜಗದೀಶ ಹಿರೇಮಠ, ನವೀನ ನಾಲ್ವಾಡ, ವಿಜಯ ಹೊನಗೂಡಿ, ಬಸವರಾಜ ಮಡಿವಾಳರ, ಸೋಮು ತಡಸದ, ಈರಣ್ಣ ಕುಷ್ಟಗಿ, ಸಿದ್ದಣ್ಣ ಕೊಟ್ರರಶೇಟ್ರ, ಹೇಮಣ್ಣ ಪಿಳ್ಳೆ, ವಾಗೇಶ ವಸ್ತ್ರದ, ಮಂಜುನಾಥ ಅಂತರಗೊಂಡ, ಚೇತನಅಬ್ಬಿಗೇರಿ, ಪರಶುರಾಮ ಮಳ್ಳದ, ಈಶ್ವರ ಹಳ್ಳಿ, ರಾಚಪ್ಪ ಅಂತರಗೊಂಡ, ಆದರ್ಶ ಬಳಗಾನೂರ, ಇಮಾಮ ಮುಲ್ಲಾ, ರುದ್ರಪ್ಪ ಮಲ್ಲಾಪೂರ, ರಾಕೇಶ ಮೊರಬದ, ಬಸವರಾಜ ಮೇಲಗಿರಿ, ಕಾರ್ತಿಕ ಬಡಿಗೇರ, ಮಂಜು ಅಕ್ಕಿ, ಸುನೀಲ ಮಡಿವಾಳರ, ಸಾಗರ ಮಡಿವಾಳರ, ಅಭಿಷೇಕ ಮಾಳವಾಡ, ರಾಚಪ್ಪ ಮಲ್ಲಾಪೂರ, ಬಸವರಾಜ ದ್ಯಾಮಪೂರ ಸೇರಿದಂತೆ ಭಕ್ತಾದಿಗಳು ಪಾಲ್ಗೊಂಡಿದ್ದರು.

## ಲೆಕ್ಕದ ವೀರೇಶ್ವರ ದೇಗುಲದಲ್ಲಿ ಹಮ್ಮಿಕೊಂಡಿದ್ದ ವಾರ್ಡ್ ಸಭೆಯಲ್ಲಿ ಡಿ.ಆರ್ ಪಾಟೀಲ

# ಕೆಳ ಹಂತದಿಂದಲೇ ಅಭಿವೃದ್ಧಿಗೆ ಆದ್ಯತೆ




■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಮಹಾತ್ಮ ಗಾಂಧೀಜಿಯವರ ಗ್ರಾಮ ಸ್ವರಾಜ್ ಕನಸನ್ನು ನನಸು ಮಾಡಲು ಕೆಳ ಹಂತದಿಂದಲೇ ಅಭಿವೃದ್ಧಿ ಯೋಜನೆಗಳನ್ನು ರೂಪಿಸಲು ರಾಜ್ಯ ಸರಕಾರ ಮುಂದಾಗಿದ್ದು, ಗ್ರಾಮಸ್ಥರು ಆಸಕ್ತಿ ವಹಿಸಿ ತಮ್ಮ ವಾರ್ಡ್‌ಗಳಲ್ಲಿ ಅಭಿವೃದ್ಧಿ ಮಾಡಬೇಕಾಗಿರುವ ಕೆಲಸಗಳನ್ನು ಚರ್ಚಿಸಬೇಕು ಎಂದು ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ, ಮಾಜಿ ಶಾಸಕ ಡಿ.ಆರ್. ಪಾಟೀಲ ಹೇಳಿದರು.

ಇಲ್ಲಿಯ ಗ್ರಾಮ ಪಂಚಾಯಿತಿಯು ಲೆಕ್ಕದ ವೀರೇಶ್ವರ ದೇಗುಲದಲ್ಲಿ ಹಮ್ಮಿಕೊಂಡಿದ್ದ ವಾರ್ಡ್ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಈ ಹಿಂದೆ ರಾಜ್ಯ ಮತ್ತು ಕೇಂದ್ರದಲ್ಲಿ ಸರಕಾರಿ ಅಧಿಕಾರಿಗಳಿಂದಲೇ ನಮ್ಮ ಗ್ರಾಮದ ಯೋಜನೆಗಳು ರೂಪಿತವಾಗುತ್ತಿದ್ದವು. ಇದರಿಂದ ಗ್ರಾಮದಲ್ಲಿ ಮೂಲಭೂತವಾಗಿ ಆಗಬೇಕಾಗಿರುವ ಕೆಲಸಗಳಿಗೆ ಆದ್ಯತೆ ಸಿಗುತ್ತಿರಲಿಲ್ಲ. ಪ್ರಮುಖವಾಗಿ ಎಷ್ಟೋ ಗ್ರಾಮಗಳಲ್ಲಿ ಈವರೆಗೂ ಸಹ ಸ್ಮಶಾನವೇ ಇಲ್ಲ. ಇಂತಹ ಸಮಸ್ಯೆಗಳಿಗೆ 2013ರಲ್ಲಿ ಕಾಂಗ್ರೆಸ್ ಸರಕಾರದಲ್ಲಿ ಗ್ರಾಮಾಭಿವೃದ್ಧಿ ಪಂಚಾಯತ್ ರಾಜ್ ಸಚಿವರಾಗಿದ್ದ ಎಚ್.ಕೆ. ಪಾಟೀಲರು 'ನಮ್ಮ ಗ್ರಾಮ ನಮ್ಮ ಯೋಜನೆ'ಯನ್ನು ಜಾರಿಗೆ ತಂದು ಕೆಳ ಹಂತದ ಜನರ ಮೂಲಭೂತ ಸೌಲಭ್ಯಗಳನ್ನು ಒದಗಿಸುತ್ತಾ ಬಂದಿದ್ದಾರೆ.

ಈಗ ಮತ್ತೆ ಈ ಯೋಜನೆಯ ಮೂಲಕ ತಮ್ಮ ಗ್ರಾಮದ ಯೋಜನೆಯನ್ನು ತಾವೇ ತಯಾರಿಸಿ ಗ್ರಾ.ಪಂ ಮೂಲಕ ಸರಕಾರಕ್ಕೆ ಕಳುಹಿಸಿದರೆ ಹಂತ ಹಂತವಾಗಿ ಅನುಷ್ಠಾನ ಮಾಡಲು ಜನಪ್ರತಿನಿಧಿಗಳಿಗೆ ಅನುಕೂಲವಾಗುತ್ತದೆ. ಸ್ವಾಮಿ ವಿವೇಕಾನಂದರ ತತ್ವಗಳಡಿ ಇಡೀ ಗ್ರಾಮವೇ ಒಂದು ಕುಟುಂಬವಾಗಬೇಕು. ಈ ಕಾರ್ಯ ಚಟುವಟಿಕೆಗೆ ಯುವಕರು, ಯುವತಿಯರು ಮುಂದೆ ಬಂದು ಲಕ್ಕುಂಡಿ ದೇಶದಲ್ಲಿಯೇ ಮಾದರಿಯಾಗುವಂತೆ ಮಾಡಬೇಕು ಎಂದು ಸಲಹೆ ನೀಡಿದರು.

> ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಮಾತನಾಡಿ, ಈಗಾಗಲೇ ಅಂಗನವಾಡಿ, ಶಾಲಾ-ಕಾಲೇಜುಗಳಿಗೆ ಕುಡಿಯುವ ನೀರಿನ ಯಂತ್ರ, ಪರೀಕ್ಷೆಗೆ ಸಿದ್ಧವಾಗಲು ಮಿನಿ ಪತ್ರಿಕೆ, ನೋಟ್ ಬುಕ್ ಕೊಡುಗೆ ನೀಡಲಾಗಿದೆ. 15ನೇ ಹಣಕಾಸು ಯೋಜನೆಯಲ್ಲಿ ವಿವಿಧ ವಾರ್ಡ್‌ಗಳಲ್ಲಿ ಸಿ.ಸಿ. ರಸ್ತೆ, ಹೈ ಮಾಸ್ಟ್ ದೀಪ, ಗಟಾರು ನಿರ್ಮಾಣ, ಸಿಸ್ಟನ್ ಅಳವಡಿಕೆ ಸೇರಿದಂತೆ ಹಲವು ಅಭಿವೃದ್ಧಿ ಕಾರ್ಯಗಳನ್ನು ಮಾಡಲಾಗಿದೆ ಎಂದರು.

ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ ಮಾತನಾಡಿ, ಈಗಾಗಲೇ ಸಿ.ಎಂ ಸಿದ್ಧರಾಮಯ್ಯನವರ ಸರಕಾರ 5 ಗ್ಯಾರಂಟಿಗಳ ಮೂಲಕ ಮಹಿಳೆಯರಿಗೆ, ಯುವಕರಿಗೆ ಬಲ ತುಂಬಿದ್ದಾರೆ. ಪರಸ್ಪರ ಸಹಕಾರದಿಂದ ತಮ್ಮ ಗ್ರಾಮದ ಹಲವಾರು ಅಭಿವೃದ್ಧಿ ಯೋಜನೆಗಳನ್ನು ಸಾಕಾರಗೊಳಿಸಿಕೊಳ್ಳಬೇಕು ಎಂದರು.

ಗ್ರಾ.ಪಂ ಸದಸ್ಯ ಪೀರಸಾಬ ನದಾಫ್ ಅಧ್ಯಕ್ಷತೆ ವಹಿಸಿದ್ದರು. ಜಿ.ಪಂ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ, ಗ್ರಾ.ಪಂ ಸದಸ್ಯರಾದ ಬಸವರಾಜ ಯಲಿಶಿರುಂದ, ಶ್ರೇಯಾ ಕಟಿಗ್ಗಾರ, ಅನ್ನಪೂರ್ಣ ರಿತ್ತಿ, ವಿರುಪಾಕ್ಷಪ್ಪ ಬೆಟಗೇರಿ, ರಮೇಶ ಭಾವಿ, ಹನುಮಂತಪ್ಪ ಬಂಗಾರಿ, ನೀಲವ್ವ ಬಂಡಿ, ದೇವಪ್ಪ ಖಂಡು, ಬಸವಣ್ಣೆಪ್ಪ ಮಾಡಲಗೇರಿ, ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಕೊಟ್ರೇಶ ವಿಭೂತಿ ಉಪಸ್ಥಿತರಿದ್ದರು. ಪಿ.ಡಿ.ಓ ಅಮೀರನಾಯಕ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಿ.ಬಿ. ಜಾನೋಪಂತರ ಸ್ವಾಗತಿಸಿದರು. ಎಂ.ಎ. ಗಾಜಿ ವಂದಿಸಿದರು.

# ಸಾಮಾಜಿಕ ಹೋರಾಟಗಾರ ವಸಂತ್ ಗಿಳಿಯಾರ್ ವಿರುದ್ಧ ಬೆಳ್ತಂಗಡಿ ಠಾಣೆಯಲ್ಲಿ ಕೇಸ್!

■ವಿಜಯಸಾಕ್ಷಿ ಸುದ್ದಿ, ಮಂಗಳೂರು

ಸಾಮಾಜಿಕ ಹೋರಾಟಗಾರ ವಸಂತ್ ಗಿಳಿಯಾರ್ ವಿರುದ್ಧ ಬೆಳ್ತಂಗಡಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬೆಳ್ತಂಗಡಿ ತಾಲೂಕಿನ ಕ್ರೈಸ್ತರ ಬಗ್ಗೆ ಸುಳ್ಳು ಸುದ್ದಿ ಹಬ್ಬಿಸಿದ್ದಾರೆ ಎಂದು ಕರ್ನಾಟಕ ಖಜಖಊ ಮಲಬಾರ್ ಕೆತೋಲಿಕ್ ಅಸೋಸಿಯೇಷನ್ ದೂರು ನೀಡಿದೆ. ಗಿಳಿಯಾರ್ ವಿರುದ್ಧ ಧರ್ಮ, ಸಮುದಾಯಗಳನ್ನು ಎತ್ತಿ ಕಟ್ಟಿದ ಆರೋಪವನ್ನ ಮಾಡಲಾಗಿದೆ. ಫ್ರೀಡಂ ಪಾರ್ಕ್ ನಲ್ಲಿ ನಡೆಸಿದ ಧರ್ಮ ಸಂರಕ್ಷಣಾ ಸಭೆಯಲ್ಲಿ ವಸಂತ್ ಗಿಳಿಯಾರ್ ಭಾಷಣ ಮಾಡುವ ವೇಳೆ, ಧರ್ಮಸ್ಥಳದ ಬೆಳ್ತಂಗಡಿ ಭಾಗದಲ್ಲಿ ಕ್ರೈಸ್ತ ಮಿಷನರಿಗಳ ಪ್ರಭಾವ ಹೆಚ್ಚಾಗಿದೆ.

ಮಿಷನರಿಗಳ ಪ್ರಭಾವದಿಂದ ಹಿಂದೂಗಳ ತುಳಸಿ ಕಟ್ಟೆ ಒಡೆಯಲಾಗಿದೆ. ತುಳಸಿ ಕಟ್ಟೆ ಒಡೆದು ಶಿಲುಬೆ ಇಡಲಾಗಿದೆ. 1983 ರಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಪ್ರಾರಂಭವಾದ ನಂತರ ಈ ಕೃತ್ಯ ನಿಂತಿದೆ.

ಆಮಿಷಗಳಿಗೆ ಬಲಿಯಾಗದಂತೆ ಗ್ರಾಮ ಅಭಿವೃದ್ಧಿ ಯೋಜನೆ ನೋಡಿಕೊಂಡಿದೆ ಎಂದಿದ್ದಾರೆ.

ಆ ಮೂಲಕ ಸಾರ್ವಜನಿಕವಾಗಿ ಗಿಳಿಯಾರ್ ಸುಳ್ಳು ಆರೋಪ ಮಾಡಿದ್ದಾರೆ. ಅವರ ಹೇಳಿಕೆ ವಿರುದ್ಧ ಯಾವುದೇ ಠಾಣೆಗಳಲ್ಲಿ ದೂರು ದಾಖಲಾಗಿಲ್ಲ. ದಂಗೆ ಏಳುವಂತೆ ಪ್ರೇರೇಪಿಸುವ ಉದ್ದೇಶದಿಂದ ಈ ಭಾಷಣ ಮಾಡಿದ್ದಾರೆ. ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಬಗ್ಗೆ ನಮಗೆ ಉತ್ತಮ ಅಭಿಪ್ರಾಯವಿದೆ. ಆದರೆ ಗಿಳಿಯಾರ್ ಕಟ್ಟುಕಥೆಯನ್ನ ಕಟ್ಟಿದ್ದಾರೆ ಎಂದು ಆರೋಪಿಸಿ ದೂರು ನೀಡಲಾಗಿದೆ.

# ಧರ್ಮಸ್ಥಳ ಪರ ಹೋರಾಟದಲ್ಲಿ ಗದುಗಿನ ಬಿಜೆಪಿ ಯುವ ಮೋರ್ಚಾ ತಂಡ



■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀಕ್ಷೇತ್ರ ಧರ್ಮಸ್ಥಳದಲ್ಲಿ ಸೋಮವಾರ ನಡೆದ 'ಧರ್ಮದ ಉಳಿವಿಗಾಗಿ ಧರ್ಮಯುದ್ಧ' ಹೋರಾಟದಲ್ಲಿ ಕರ್ನಾಟಕ ರಾಜ್ಯ ಯುವ ಮೋರ್ಚಾ ಅಧ್ಯಕ್ಷ ಧೀರಜ್ ಮುನಿರಾಜ್ ನೇತೃತ್ವದಲ್ಲಿ ಗದಗ ಜಿಲ್ಲಾ ಯುವ ಮೋರ್ಚಾ ತಂಡದ ಸದಸ್ಯರು ಹೋರಾಟದಲ್ಲಿ ಭಾಗವಹಿಸಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಕ್ತಿ ಕತ್ತಿ, ಜಿಲ್ಲಾ ಕಾರ್ಯದರ್ಶಿ ಧರ್ಮರಾಜ ಕೋಂಚಿಗೇರಿ, ವಿನೋದ ಹಂಸನೂರ, ಜಿಲ್ಲಾ ಕಾರ್ಯಕಾರಿಣಿ ಸದಸ್ಯ ಸಚಿನ ಮಡಿವಾಳರ, ನಿಕಟಪೂರ್ವ ರೋಣ ಮಂಡಲ ಅಧ್ಯಕ್ಷ ಉಮೇಶ ಚೆನ್ನುಪಾಟೀಲ್, ಡಂಬಳ ಮಂಡಲ ಅಧ್ಯಕ್ಷ ಪ್ರಕಾಶ ಕೋತಂಬ್ರಿ, ಪ್ರಧಾನ ಕಾರ್ಯದರ್ಶಿ ಶಿವಾನಂದ ಬಂಡಿ, ಗದಗ ನಗರ ಮಂಡಲ ಪ್ರಧಾನ ಕಾರ್ಯದರ್ಶಿ ಬಸವರಾಜ ನರೇಗಲ್, ಮಂಡಲ ಕಾರ್ಯಕಾರಣಿ ಸದಸ್ಯ ವಿನಾಯಕ ಹೊರಕೇರಿ ಸೇರಿದಂತೆ ಯುವಕರು ಉಪಸ್ಥಿತರಿದ್ದರು.

# ಗ್ಯಾರಂಟಿ ಯೋಜನೆಗಳು ಜನರ ಜೀವನ ಮಟ್ಟ ಸುಧಾರಿಸುವಲ್ಲಿ ಮುಖ್ಯ ಪಾತ್ರ ವಹಿಸಿವೆ!

■ವಿಜಯಸಾಕ್ಷಿ ಸುದ್ದಿ, ಡಂಬಳ

ಗ್ಯಾರಂಟಿ ಯೋಜನೆಗಳು ಜನರ ಜೀವನ ಮಟ್ಟ ಸುಧಾರಿಸುವಲ್ಲಿ ಮುಖ್ಯ ಪಾತ್ರ ವಹಿಸಿವೆ. ಬೇರೆ ರಾಜ್ಯಗಳಲ್ಲೂ ಗ್ಯಾರಂಟಿ ಯೋಜನೆಗಳನ್ನು ಅನುಸರಿಸುತ್ತಿದ್ದಾರೆ. ಶಕ್ತಿ ಯೋಜನೆ ಮೂಲಕ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಉಚಿತವಾಗಿ ಪ್ರಯಾಣಿಸಲು ಅವಕಾಶ ಮಾಡಿಕೊಟ್ಟಿರುವ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು 'ಗೋಲ್ಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್' ದಾಖಲೆ ಮಾಡಿದೆ ಎಂದು ರೋಣ ಗ್ಯಾರಂಟಿ ಸಮಿತಿ ಅಧ್ಯಕ್ಷ ಮಿಥುನ ಜಿ ಪಾಟೀಲ್ ಹೇಳಿದರು.

ಡಂಬಳ ಗ್ರಾಮದ ಜಗದ್ಗುರು ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಹೋಬಳಿ ಮಟ್ಟದ ಗೃಹಲಕ್ಷ್ಮಿ- 2ಸಾವಿರ, ಅನ್ನಭಾಗ್ಯ- 10ಕೆಜಿ ಅಕ್ಕಿ, ಶಕ್ತಿ- ಉಚಿತ ಬಸ್ ಪ್ರಯಾಣ, ಗೃಹಜ್ಯೋತಿ -ಉಚಿತ ವಿದ್ಯುತ್, 5 ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಹಾಗೂ ಜನಸ್ಪಂದನ ಕಾರ್ಯಕ್ರಮ ಉದ್ಘಾಟಿಸಿ




ಮಾತನಾಡಿದ ಅವರು, ಈ ಹಿಂದಿನ ಸರಕಾರ ಜನತೆಗೆ ದುಬಾರಿ ಬದುಕು ನಡೆಸುವಂತೆ ಮಾಡಿತ್ತು, ಇದನ್ನು ಕಂಡು ಕೊಂಡ ಕಾಂಗ್ರೆಸ್ ಪಕ್ಷ ಪ್ರಣಾಳಿಕೆಯಲ್ಲಿ 5ಗ್ಯಾರಂಟಿಗಳನ್ನು ನಿಮಗೆ ಕೊಟ್ಟ ಬರವಸೆಯಂತೆ ಜಾರಿಗೆ ತರುವುದರ ಮೂಲಕ ಬಡವರಿಗೆ, ಕೂಲಿಕಾರ್ಮಿಕರಿಗೆ, ವಿದ್ಯಾರ್ಥಿಗಳು, ಮಹಿಳೆಯರು ಆರ್ಥಿಕವಾಗಿ ಮುಖ್ಯವಾಹಿನಿಗೆ ಬರಬೇಕು ಒಂದು ಉತ್ತಮ ಕುಟುಂಬ ಅವರದಾಗಬೇಕು ಎನ್ನುವ ಹಿನ್ನಲೆಯಲ್ಲಿ ಜಾರಿಗೆ ತಂದು ಯಶಸ್ವಿಯಾಗಿ ಮುಂದುವರೆಸಲಾಗಿದೆ.

> ಶಾಸಕರಾದ ಜಿ.ಎಸ್.ಪಾಟೀಲರು ಪ್ರತಿ ಬಡ ಕುಟುಂಬಗಳಿಗೆ ಗ್ಯಾರಂಟಿ ಯೋಜನೆಗಳು ತಲುಪಬೇಕು ಆರ್ಥಿಕವಾಗಿ ಸಬಲರಾಗಬೇಕು ಎನ್ನುವ ಹಿನ್ನೆಲೆಯಲ್ಲಿ, ಈ ಗ್ಯಾರಂಟಿ ಯೋಜನೆಗಳಿಂದ ಬಿಪಿಎಲ್ ಕುಟುಂಬದವರು ಯಾವುದೇ ಕಾರಣಕ್ಕೂ ವಂಚಿತರಾಗಬಾರದು, ಅರ್ಹರೆಲ್ಲರಿಗೂ ಗ್ಯಾರಂಟಿ ಯೋಜನೆಗಳು ತಲುಪಬೇಕು. ಶೇ.100 ರಷ್ಟು ಪ್ರಗತಿ ಸಾಧಿಸಬೇಕು. ಆ ನಿಟ್ಟಿನಲ್ಲಿ ಗ್ಯಾರಂಟಿ ಪ್ರಗತಿ ಪರಶೀಲನಾ ಸಭೆ ಹಮ್ಮಿಕೊಳ್ಳಲಾಗಿದೆ.
>
> **–ಡಿ.ಡಿ.ಮೊರನಾಳ,** ಅಧ್ಯಕ್ಷರು, ತಾಲೂಕ ಗ್ಯಾರಂಟಿ ಸಮಿತಿ.

ಈ ಗ್ಯಾರಂಟಿ ಯೋಜನೆಗಳಿಂದ ವಂಚಿತರಾದವರು ಸಂಭಂದಿಸಿದ ಇಲಾಖೆಗೆ ಭೇಟಿ ನೀಡಿ ಸದುಪಯೋಗ ಪಡೆದುಕೊಳ್ಳಬೇಕು ಎಂದು ಮಿಥುನ್ ಪಾಟೀಲ ಹೇಳಿದರು.

ಜಿಲ್ಲಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಬಿ.ಅಸೂಟಿ ಮಾತನಾಡಿ, ಗ್ಯಾರಂಟಿ ಯೋಜನೆಗಳು ಶೇ.100 ರಷ್ಟು ಪ್ರಗತಿ ಸಾಧಿಸಬೇಕು. ಪ್ರತಿಯೊಬ್ಬರಿಗೂ ತಲುಪಬೇಕು. ಆ ನಿಟ್ಟಿನಲ್ಲಿ ಅಂಗನವಾಡಿ ಕಾರ್ಯಕರ್ತರು, ಆಶಾ ಕಾರ್ಯಕರ್ತರು, ತಾ.ಪಂ. ಇಓಗಳು, ಪಿಡಿಓಗಳು ಗ್ರಾಮ ಆಡಳಿತ ಅಧಿಕಾರಿಗಳು, ಸೇರಿದಂತೆ ಹಲವು ಇಲಾಖೆಗಳ ಜೊತೆಗೂಡಿ ಮನೆ ಮನೆ ಸಮೀಕ್ಷೆ ಮಾಡಿ ಗ್ಯಾರಂಟಿ ಯೋಜನೆ ಪ್ರಗತಿ ಸಾಧಿಸಬೇಕು ಎಂದು ಹೇಳಿದರು. ಗ್ಯಾರಂಟಿ ಸಮಿತಿ ಉಪಾಧ್ಯಕ್ಷ ಹೇಮಂತಗೌಡ ಪಾಟೀಲ ಮಾತನಾಡಿದರು.

> ಯುವನಿಧಿ:550 ಫಲಾನಭವಿಗಳು, 1,38,93000, ಗೃಹಲಕ್ಷ್ಮಿ 35579 ಮಹಿಳೆಯರು ಫಲಾನುಭವಿಗಳು, ಶೇ.98.50ರಷ್ಟು, ಗೃಹ ಜ್ಯೋತಿ: ಗೃಹ ಬಳಕೆ 33555, ಶೇ 98.61, ಶಕ್ತಿ- ಉಚಿತ ಬಸ್ ಪ್ರಯಾಣ ಮಾಡಿರುವ ಮಹಿಳೆಯರ ಸಂಖ್ಯೆ: 10910054, 485553559 ಆಗಿರುತ್ತದೆ ಎಂದು ಇಲಾಖಾವಾರು ಮಾಹಿತಿ ನೀಡಲಾಯಿತು. ಮುಂಡರಗಿಯಿಂದ ಗದಗ ಹೋಗುವ 6ಕ್ಕೂ ಹೆಚ್ಚು ಬಸ್ ನಾನ್ ಸ್ಟಾಪ್ ಇರುವುದರಿಂದ ಡಂಬಳ ಬಹು ದೊಡ್ಡ ಗ್ರಾಮ ಮತ್ತು ಗ್ರಾಮದಿಂದ ವಿವಿಧ ಸ್ಥಳಗಳಿಗೆ ತೆರಳುತ್ತಿರುವ ಕಾರಣ ಶಾಲಾ-ಕಾಲೇಜುಗಳಿಗೆ ತೆರಳುವ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದ್ದು, ಬಸ್‌ಗಳು ಗ್ರಾಮಕ್ಕೆ ಬಂದು ಹೋಗುವಂತಾಗಬೇಕು ಎಂಬ ಗ್ರಾಮಸ್ಥರ ಬೇಡಿಕೆಗೆ ಶೀಘ್ರದಲ್ಲೇ ಅವಕಾಶ ಮಾಡಿಕೊಡಲಾಗುವುದು ಎಂದು ಭರವಸೆ ನೀಡಲಾಯಿತು.

ಈ ಸಂದರ್ಭದಲ್ಲಿ ಇಓ ವಿಶ್ವನಾಥ ಹೊಸಮನಿ, ಹುಸೇನಸಾಬ ಖಾತರಕಿ, ಸಿಡಿಪಿಓ ಮಾಹದೇವ ಇರಸನಾಳ, ಗ್ರಾಪಂ ಅಧ್ಯಕ್ಷೆ ನಾಗಮ್ಮ ಬಳ್ಳಾರಿ, ಗ್ಯಾರಂಟಿ ಸಮಿತಿ ಸದಸ್ಯ ರಾಮಣ್ಣ ಮೇಗಲಮನಿ, ನಾಗರಾಜ್ ಸಜ್ಜನ, ವಿಶ್ವನಾಥ್ ಪಾಟೀಲ, ಗೀತಾ ಕೆ ನಾಡಗೌಡರ, ಭುವನೇಶ್ವರಿ ಕಲ್ಲಕುಟಿಗರ, ಕಾಶಪ್ಪ ಹೊನ್ನೂರ, ಗ್ರಾಮದ ಜಿ.ಎಸ್.ಕೊರ್ಲಹಳ್ಳಿ, ಬಸುರಡ್ಡಿ ಬಂಡಿಹಾಳ, ಮಹೇಶ ಗಡಗಿ, ಬಾಬು ಮೂಲಿಮನಿ ಮಹಿಳೆಯರು, ಯುವಕರು, ಗ್ರಾಮಸ್ಥರು ಇದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka